# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 31 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 14–08–2024 ಬುಧವಾರ | ಪುಟ: 4 | ಬೆಲೆ : ರೂ.2–00
Volume - 02 Issue - 31 | Title- Code: KARKAN 28269 | Chitradurga | Date: 14-08-2024 Wednesday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಬೈಕ್ ರ್ಯಾಲಿಗೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹಸಿರು ನಿಶಾನೆ 2

5 ವರ್ಷದಲ್ಲಿ 7 ಬಾರಿ ನಿಮ್ಮ ಮಕ್ಕಳನ್ನು ಲಸಿಕಾ ಕೇಂದ್ರಕ್ಕೆ ಕರೆ ತನ್ನಿ 3

ತುರ್ತು ಕುಡಿವ ನೀರಿನ ಕಾಮಗಾರಿಗಳಿಗೆ ಘಟನೋತ್ತರ ಅನುಮತಿ:ಜೆ.ಸೋಮಶೇಖರ್ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಫಾಸ್ಟ್ ನ್ಯೂಸ್

### ಆ. 15 ರಂದು ಜಿಲ್ಲಾ ಕೇಂದ್ರದಲ್ಲಿ ಸ್ವಾತಂತ್ರ್ಯ ದಿನಾಚರಣೆ

» ಚಿತ್ರದುರ್ಗ

ಭಾರತದ ಸ್ವಾತಂತ್ರ್ಯ ದಿನಾಚರಣೆ ಸಮಾರಂಭ ಆ. 15 ರಂದು ಬೆಳಿಗ್ಗೆ 09 ಗಂಟೆಗೆ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದಲ್ಲಿ ಜರುಗಲಿದೆ. ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಅವರು ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಅಂದು ರಾಷ್ಟ್ರ ಧ್ವಜಾರೋಹಣ ನೆರವೇರಿಸುವರು. ಸಂಸದ ಗೋವಿಂದ ಎಂ. ಕಾರಜೋಳ ಅವರ ಘನ ಉಪಸ್ಥಿತಿಯಲ್ಲಿ ಜರುಗುವ ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಅವರು ವಹಿಸುವರು. ಕಾರ್ಯಕ್ರಮದಲ್ಲಿ ಹೊಸದುರ್ಗ ಶಾಸಕರು ಹಾಗೂ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಅಧ್ಯಕ್ಷ ಬಿ.ಜಿ. ಗೋವಿಂದಪ್ಪ, ಚಳ್ಳಕೆರೆ ಶಾಸಕರು ಹಾಗೂ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಟಿ. ರಘುಮೂರ್ತಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ. ಅನ್ವರ್ ಭಾಷಾ, ಮೊಳಕಾಲ್ಮೂರು ಶಾಸಕ ಎನ್.ವೈ. ಗೋಪಾಲಕೃಷ್ಣ, ಹೊಳಲ್ಕೆರೆ ಶಾಸಕ ಡಾ. ಎಂ. ಚಂದ್ರಪ್ಪ, ವಿಧಾನಪರಿಷತ್ ಸದಸ್ಯರುಗಳಾದ ಚಿದಾನಂದ ಎಂ. ಗೌಡ, ಕೆ.ಎಸ್. ನವೀನ್, ಡಿ.ಟಿ. ಶ್ರೀನಿವಾಸ್, ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ. ಬಿ. ಯೋಗೇಶ್ ಬಾಬು, ಆದಿ ಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್. ಮಂಜುನಾಥ್, ಕರ್ನಾಟಕ ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷೆ ಸವಿತಾ ರಘು, ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ತಾಜ್‌ಪೀರ್ ಸೇರಿದಂತೆ ವಿವಿಧ ಗಣ್ಯರು ಗೌರವಾನ್ವಿತ ಅತಿಥಿಗಳಾಗಿ ಪಾಲ್ಗೊಳ್ಳುವರು. ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಯಾಗಿರುವ ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತ ಅಮ್ಲಾನ್ ಆದಿತ್ಯ ಬಿಸ್ವಾಸ್, ಜಿಲ್ಲಾಧಿಕಾರಿ ಟಿ. ವೆಂಕಟೇಶ್, ಜಿ.ಪಂ. ಸಿಇಒ ಎಸ್.ಜೆ. ಸೋಮಶೇಖರ್, ಜಿಲ್ಲಾ ಪೊಲೀಸ್ ಅಧೀಕ್ಷಕ ಧರ್ಮೇಂಧರ್ ಕುಮಾರ್ ಮೀನಾ ಅವರು ಸಮಾರಂಭದಲ್ಲಿ ಭಾಗವಹಿಸುವರು. ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಅಂದು ಸಂಜೆ 06 ಗಂಟೆಗೆ ವಿವಿಧ ಶಾಲಾ ಕಾಲೇಜು ವಿದ್ಯಾರ್ಥಿ ಗಳಿಂದ ಹಾಗೂ ಜಿಲ್ಲಾಡಳಿತ, ಸಾರ್ವಜನಿಕ ಶಿಕ್ಷಣ ಇಲಾಖೆ, ನಗರಸಭೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ತ.ರಾ.ಸು. ರಂಗಮಂದಿರದಲ್ಲಿ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.

### ರಾಜ್ಯದಲ್ಲಿ ಪಾರ್ಟ್ ಟೈಮ್ ನೀರಾವರಿ ಮಂತ್ರಿ ಇದ್ದಾರೆ: ಕಾರಜೋಳ

» ಚಿತ್ರದುರ್ಗ

ರಾಜ್ಯ ಕಾಂಗ್ರೆಸ್ ಸರ್ಕಾರ ಭ್ರಷ್ಟಾಚಾರದಲ್ಲಿ ಮುಳುಗಿದೆ ನೀರಾವರಿ ಇಲಾಖೆಯನ್ನು ಕಡೆಗಣನೆ ಮಾಡಿದೆ ರಾಜ್ಯದಲ್ಲಿ ಪಾರ್ಟ್ ಟೈಮ್ ನೀರಾವರಿ ಮಂತ್ರಿ ಇದ್ದಾರೆ ಎಂದು ಸಂಸದ ಗೋವಿಂದ ಕಾರಜೋಳ ವ್ಯಂಗ್ಯವಾಡಿದ್ದಾರೆ.

ಚಿತ್ರದುರ್ಗ ನಗರದಲ್ಲಿ ಅವರನ್ನು ಭೇಟಿಯಾದ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಡಿಕೆಶಿ ಒಂದು ಪಕ್ಷದ ಜವಾಬ್ದಾರಿ, ಇನ್ನೊಂದು ಇಲಾಖೆ ಮಂತ್ರಿಯಾಗಿದ್ದಾರೆ. ಡ್ಯಾಂ ಸೇಫ್ಟಿ ಕಮಿಟಿ ಸಭೆ ಮಾಡಿ ಸಲಹೆ ಸೂಚನೆ ಪಡೆಯಬೇಕಿತ್ತು 13–33ಗೇಟ್ ನೋಡುವ ಜವಬ್ದಾರಿ ರಾಜ್ಯ ಸರ್ಕಾರಕ್ಕಿದೆ ರಾಜ್ಯ ಸರ್ಕಾರ ನೀರು ನೋಡಿಕೊಂಡು ಸುಮ್ಮನೆ ಕೂಡಬಾರದು ಎಂದ ಸಂಸದರು ಬರ, ಪ್ರವಾಹ ಎಲ್ಲದಕ್ಕೂ ಮೋದಿ ಕಡೆ ಬೆರಳು ತೋರುವುದು ಸರಿಯಲ್ಲ ರಾಜ್ಯ ಸರ್ಕಾರ ಏತಕ್ಕೆ ಇರವುದು, ಬಾಚಿಕೊಂಡು ಹೋಗಲಿಕ್ಕಾ? 15ಲಕ್ಷ ಹೆಕ್ಟೇರ್‌ನ ರೈತರಿಗೆ ಪರಿಹಾರವೇನು ಯೋಚಿಸಬೇಕು ಟಿಬಿ ಡ್ಯಾಂನ 52ಟಿಎಂಸಿ ನೀರು ಹರಿದು ಹೋಗುತ್ತಿದೆ. ಪರ್ಯಾಯ ಕಾರ್ಯಕ್ರಮ ಏನೆಂಬುದು ಯೋಚಿಸಬೇಕು ಅದನ್ನು ಬಿಟ್ಟು ಬೀದಿನಾಟಕ ಮಾಡಬಾರದು ಎಂದು ಸರ್ಕಾರವನ್ನು ಕೆಣಕಿದರು.

# ಕೆನೆಪದರದ ಬಗ್ಗೆ ಅನಗತ್ಯ ಗೊಂದಲ ಬೇಡ

» ಚಿತ್ರದುರ್ಗ



ಒಳ ಮೀಸಲಾತಿಯಿಂದ ಕೇವಲ ಎಸ್‌ಸಿ ಮಾತ್ರವಲ್ಲಿಎಸ್‌ಟಿಸಮುದಾಯದವರಿಗೂ ಲಾಭ ಸಿಗಲಿದೆ. ಆದ್ದರಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತುರ್ತಾಗಿ ಗಮನ ಹರಿಸಿ ಒಳ ಮೀಸಲಾತಿ ಜಾರಿಗೊಳಿಸಬೇಕು ಎಂದು ಮಾದಾರ ಚನ್ನಯ್ಯ ಗುರುಪೀಠದ ಶ್ರೀ ಮಾದಾರ ಚನ್ನಯ್ಯ ಸ್ವಾಮೀಜಿ ಒತ್ತಾಯಿಸಿದರು.

ನಗರದ ಶ್ರೀಮಠದಲ್ಲಿ ಮಂಗಳವಾರ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸುಪ್ರೀಂಕೋರ್ಟ್ ಒಳ ಮೀಸಲಾತಿ ಪರವಾಗಿ ಐತಿಹಾಸಿಕ ತೀರ್ಪು ಕೊಟ್ಟಿದೆ. ಒಳ ಮೀಸಲಾತಿಯ ಹೋರಾಟ ಮಾದಿಗ ಸಮಾಜದ್ದೇ ಆದರೂ. ಎಲ್ಲ 101 ಪರಿಶಿಷ್ಟ ಜಾತಿಗಳಿಗೂ ಜನಸಂಖ್ಯೆಯ ಅನುಸಾರ ಸಾಮಾಜಿಕ ನ್ಯಾಯವನ್ನು ಒದಗಿಸಲಿದೆ ಎಂದರು.

ಮಾದಿಗ ಸಮಾಜದ ಒಳ ಮೀಸಲಾತಿಯ ಹೋರಾಟಕ್ಕೆ ಮೂರು ದಶಕ ಮೀರಿದ ಇತಿಹಾಸ ಇದೆ. ಹೋರಾಟವನ್ನುಜನಾಂದೋಲನ /ಬೀದಿ ಹೋರಾಟ, ಕಾನೂನಾತ್ಮಕ ಸಂಘರ್ಷ ಆಡಳಿತ ವ್ಯವಸ್ಥೆಯ ಮೇಲೆ ಒತ್ತಡ ತರುವುದರ ಮೂಲಕ ಮಾಡಲಾಯಿತು. ಇದರಲ್ಲಿ ಮಾದಾರ ಚೆನ್ನಯ್ಯ ಗುರುಪೀಠ ಮೂರೂ ಆಯಾ ಮದಲ್ಲಿ ತನ್ನ ಇತಿ–ಮಿತಿಯಲ್ಲಿ ಕೈ ಜೋಡಿಸಿ ಕೆಲಸ ಮಾಡಿದೆ.ಸಮಾವೇಶಗಳು, ಪಾದಯಾತ್ರೆ. ಧರಣಿ ಇತ್ಯಾದಿ ಹೋರಾಟಗಳಲ್ಲಿ ಶ್ರೀ ಮಠ ಸದಾ ಬೆಂಬಲಿಸಿದೆ ಎಂದು ತಿಳಿಸಿದರು.

ಮಾದಿಗ ದಂಡೋರಾದ ಎಮ್.ಶಂಕರಪ್ಪ,ತೆಲಂಗಾಣದಮಂದಕೃಷ್ಣ ಮಾದಿಗ, ಬಳ್ಳಾರಿ ಹನುಮಂತಪ್ಪ, ಮುತ್ತಣ್ಣ ಬೆನ್ನೂರು ಸೇರಿದಂತೆ ಅನೇಕ ಪ್ರಮುಖ ಹೋರಾಟ ಗಾರರು ನಿರಂತರ ಮಠದ ಜೊತೆಗಿದ್ದಾರೆ.ಅದು ಕಾಂಗ್ರೆಸ್, ಬಿಜೆಪಿ, ಜೆಡಿಎಸ್ ಇರಲಿ ಅಥವ ರಾಜ್ಯ / ಕೇಂದ್ರ ಸರಕಾರವಿರಲಿ ಶ್ರೀ ಮಠ ತನ್ನದೇ ಆದ ರೀತಿಯಲ್ಲಿ ಸಂಪರ್ಕ. ಸಂಬಂಧ ಇರಿಸಿಕೊಂಡು ಕಾರ್ಯಸಾಧನೆಯಲ್ಲಿ ತನ್ನ ಪಾತ್ರವಹಿಸಿದೆ ಎಂದರು.

ಕೆಲವರು ಕೆನೆಪದರದ ವಿಷಯ ಮುಂದಿಟ್ಟು ದಿಕ್ಕು ತಪ್ಪಿಸುತ್ತಾ ಇದ್ದಾರೆ. ಕೇಂದ್ರ ಸರಕಾರ ಕೆನೆಪದರದ ಬಗ್ಗೆ ಸ್ಪಷ್ಟ ಪಡಿಸಿದ ತರುವಾಯ ಹಿರಿಯ ದಲಿತ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರು ಅಪಸ್ವರಎತ್ತಿರುವುದುಸಾಮಾಜಿಕನ್ಯಾಯದ ದೃಷ್ಟಿಯಿಂದ ಒಳ್ಳೆಯ ಬೆಳವಣಿಗೆ ಅಲ್ಲ. ಈವರೆಗೂ ಒಳಮೀಸಲಾತಿಯ ಕುರಿತಾದ ಸುಪ್ರೀಂಕೋರ್ಟಿನ ತೀರ್ಪನ್ನು ಹಿರಿಯ ದಲಿತನಾಯಕರಾದ ಖರ್ಗೆಯವರು ಸ್ವಾಗತಿಸಿಲ್ಲ. ಹೀಗಿರುವಾಗ ಖರ್ಗೆಯವರು ಕೆನೆಪದರದ ಬಗ್ಗೆ, ಅನಗತ್ಯ ಗೊಂದಲ ಮೂಡಿಸುತ್ತಿರುವುದು ಸರಿಯಲ್ಲ ಎಂದು ಹೇಳಿದರು.

ಈ ಎಲ್ಲವನ್ನು ಸರಿಯಾಗಿ ನಿರ್ವಹಿಸುವ ಬದ್ಧತೆ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗಿದೆ ಎಂದು ನಮ್ಮ ನಂಬಿಕೆ.–ಸಂಪುಟ ಸಮಿತಿ, ಪರಿಶೀಲಿನಾ ಸಮಿತಿ, ಅಧ್ಯಯನ ಸಮಿತಿ ಇತ್ಯಾದಿ ರಚಿಸಿ ಕಾಲಹರಣ ಮಾಡುವುದು ತುರ್ತಾಗಿ ಮುಖ್ಯಮಂತ್ರಿಗಳು ಈ ಬಗ್ಗೆ ಗಮನ ಹರಿಸಲಿ. ಒಳ ಮೀಸಲಾತಿಯನ್ನು ಜಾರಿಗೊಳಿಸಬೇಕು. ಅಲ್ಲಿಯವರೆಗೆ ಕೆ.ಪಿ.ಎಸ್.ಸಿ ಸೇರಿದಂತೆ ಎಲ್ಲಾ ಸರ್ಕಾರಿ ನೇಮಕಾತಿ ಮಾಡಬಾರದು ಎಂದು ಸರ್ಕಾರಕ್ಕೆ ಮನವಿ ಮಾಡಿದರು.

ಇದರ ಬಗ್ಗೆ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ನಮ್ಮ ಒತ್ತಾಯ ಮಂಡಿಸಲಾಗುವುದು. ನಮ್ಮ ಜನರಲ್ಲಿ ಇದರ ಬಗ್ಗೆ ಜಾಗೃತಿ ಇಲ್ಲವಾಗಿದೆ ಇದರಿಂದ ಅವರು ಇದರ ಬಗ್ಗೆ ಪ್ರತಿಕ್ರಿಯೆಯನ್ನು ನೀಡಲಾಗುತ್ತಿಲ್ಲ, ನಾವು ಇದರ ಬಗ್ಗೆ ಮನವರಿಕೆಯನ್ನು ಮೂಡಿಸಬೇಕಿದೆ ಎಂದು ತಿಳಿಸಿದರು.

ಮಾದಿಗ ಹೋರಾಟ ಸಮಿತಿಯ ರಾಜ್ಯಾಧ್ಯಕ್ಷ ಬಳ್ಳಾರಿ ಹನುಮಂತಪ್ಪ ಮಾತನಾಡಿ, ಉಚ್ಚ ನ್ಯಾಯಾಲಯ ನೀಡಿದ ತೀರ್ಪನ್ನು ದೇಶದ ಹಲವಾರು ರಾಜ್ಯಗಳು ಜಾರಿಗೆ ತರಲು ಮುಂದಾಗಿದೆಸಾಮಾಜಿಕನ್ಯಾಯ,ಅಹಿಂದ ನಾಯಕ ಎಂದು ಎನ್ನಿಸಿಕೊಂಡಿರುವ ಸಿದ್ದರಾಮಯ್ಯ ರವರು ನಮ್ಮ ರಾಜ್ಯದಲ್ಲಿ ಇದನ್ನು ಜಾರಿ ಮಾಡಲು ಮೀನಾಮೇಷ ಎಣಿಸುತ್ತಿದ್ದಾರೆ. ಈ ಕೊಡಲೇ ಉಚ್ಚ ನ್ಯಾಯಾಲಯದ ಆದೇಶದಂತೆ ನಮ್ಮ ರಾಜ್ಯದಲ್ಲಿಯೂ ಸಹಾ ಒಳ ಮಿಸಲಾತಿಯನ್ನು ಜಾರಿ ಮಾಡುವಂತೆ ಸರ್ಕಾರವನ್ನು ಆಗ್ರಹಿಸಿದರು.

ಗೋಷ್ಟಿಯಲ್ಲಿ ಮಾದಿಗ ದಂಡೋರ ಸಮಿತಿಯ ರಾಜ್ಯಾಧ್ಯಕ್ಷರಾದ ಪಾವಗಡ ಶ್ರೀರಾಮ, ಮಾದಿಗ ಮಹಾಸಭಾದ ರಾಜ್ಯಾಧ್ಯಕ್ಷರಾದ ಮುತ್ತಣ್ಣ ಬೆನ್ನೂರು, ಬಿಜೆಪಿಯ ಪ್ರಧಾನ ಕಾರ್ಯದರ್ಶಿ ಮೋಹನ್ ಯೋಗೀಶ್, ಸಾಗರ್ ಸೇರಿದಂತೆ ಇತರರು ಭಾಗವಹಿಸಿದ್ದರು.

# ನಶಾ ಮುಕ್ತ ಭಾರತ ಅಭಿಯಾನ: ಜಾಗೃತಿ ಜಾಥಾ




» ಚಿತ್ರದುರ್ಗ

78ನೇ ಭಾರತ ಸ್ವಾತಂತ್ರ್ಯೋತ್ಸವ ಅಂಗವಾಗಿ ನಶಾಮುಕ್ತ ಭಾರತ ಅಭಿಯಾನದಡಿ ಚಿತ್ರದುರ್ಗ ನಗರದಲ್ಲಿ ಮಂಗಳವಾರ ಶಾಲಾ ವಿದ್ಯಾರ್ಥಿಗಳಿಂದ ಜಾಗೃತಿ ಜಾಥಾ ನಡೆಯಿತು. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ, ಡೇಟ್ ಚಾರಿಟೇಬಲ್ ಸೊಸೈಟಿ ಹಾಗೂ ಶ್ರೀ ಸಂಪಿಗೆ ಸಿದ್ದೇಶ್ವರ ಪ್ರೌಢಶಾಲೆ ಸಹಯೋಗದೊಂದಿಗೆ ಚಿತ್ರದುರ್ಗ ನಗರದ ಹೊಳಲ್ಕೆರೆ ರಸ್ತೆಯ ಶ್ರೀ ಸಂಪಿಗೆ ಸಿದ್ದೇಶ್ವರ ಪ್ರೌಢಶಾಲೆಯಲ್ಲಿ ಮಾದಕ ವಸ್ತು ಸೇವನೆ ಮಾಡದಿರಲು ಪ್ರತಿಜ್ಞಾಸ್ವೀಕರಿಸುವ ಕಾರ್ಯಕ್ರಮ ಹಾಗೂ ಜಾಗೃತಿ ಜಾಥಾ ನಡೆಸಲಾಯಿತು. ಈ ಸಂದರ್ಭದಲ್ಲಿ ಡೇಟ್ ಚಾರಿಟೇಬಲ್ ಸೊಸೈಟಿ ಅಧ್ಯಕ್ಷ ಡಾ.ಹೆಚ್.ಎಸ್.ಶಿವಣ್ಣ, ಯೋಜನಾ ನಿರ್ದೇಶಕಿ ಜಿ.ಗಾಯತ್ರಿ, ಶ್ರೀ ಸಂಪಿಗೆ ಸಿದ್ದೇಶ್ವರ ಪ್ರೌಢಶಾಲೆಯ ಮುಖ್ಯ ಶಿಕ್ಷಕರು, ಸಹ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಇದ್ದರು.

**ಚನ್ನಮ್ಮನಾಗತಿಹಳ್ಳಿ ಅರಣ್ಯ ಪ್ರದೇಶಕ್ಕೆ ನಿಧಿಗಳ್ಳರ ಲಗ್ಗೆ**

# ನಾಗಪ್ಪನ ಮೂರ್ತಿ ವಿರೂಪ



**ಚಳ್ಳಕೆರೆ:** ತಾಲ್ಲೂಕಿನ ಪರಶುರಾಮಪುರ ಹೋಬಳಿಯ ಚನ್ನಮ್ಮನಾಗತಿಹಳ್ಳಿ ವ್ಯಾಪ್ತಿಯ ಕರಿಯಣ್ಣನ ಮರಡಿ ಅರಣ್ಯ ಪ್ರದೇಶದಲ್ಲಿ ನಾಗಪ್ಪನ ಪುರಾತನ ಕಾಲದ ದೇವಸ್ಥಾನದಲ್ಲಿ ನಾಗಪಂಚಮಿ ಹಿನ್ನೆಲೆಯಲ್ಲಿ ಕಾಡುಗೊಲ್ಲ ಸಮುದಾಯದ ಕೆಲ ವಂಶದವರು ಅಲ್ಲಿರುವ ಕಲ್ಲಿನ ನಾಗರಕ್ಕೆ ಪೂಜೆ ಸಲ್ಲಿಸುತ್ತಾ ಬಂದಿರುತ್ತಾರೆ.

ಕಳೆದ ವಾರವಷ್ಟೇ ಅಮವಾಸೆ ಹಿನ್ನೆಲೆಯಲ್ಲಿ ನಿಧಿ ಆಸೆಯಿಂದ ಕೆಲವು ವ್ಯಕ್ತಿಗಳು ನಾಗಪ್ಪನ ದೇವರ ಚಿತ್ರವನ್ನು ಭಗ್ನಗೊಳಿಸಿದ್ದಲ್ಲದೆ, ಸುತ್ತಮುತ್ತಲ ಮೂರ್ನಾಲ್ಕು ಕಡೆ ಗುಂಡಿ ತೋಡುವ ಮೂಲಕ ನಿಧಿಯನ್ನು ಹುಡುಕುವ ಪ್ರಯತ್ನ ಮಾಡಿದ್ದಾರೆ.

ಪುಟ 2

**ಪ್ರಮುಖ ಸುದ್ದಿ**

# ಜಿಲ್ಲಾ ಬಿಜೆಪಿಯಿಂದ ಹರ್‌ಗರ್ ತಿರಂಗಕ್ಕೆ ಚಾಲನೆ

» ಚಿತ್ರದುರ್ಗ





ನಗರದ ಒನಕೆ ಓಬವ್ವ ವೃತ್ತದಲ್ಲಿ ಬಿಜೆಪಿ ಜಿಲ್ಲಾ ಘಟಕದಿಂದ ಹರ್‌ಗರ್ ತಿರಂಗ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ಸಂದರ್ಭದಲ್ಲಿ ಸುಮಾರು 1547 ಅಡಿ ಉದ್ದದ ತ್ರಿವರ್ಣ ಭಾವುಟವನ್ನು ನಗರದ ಕಾಲೇಜಿನ ವಿದ್ಯಾರ್ಥಿಗಳು ಹಿಡಿಯುವುದರ ಮೂಲಕ ಪ್ರದರ್ಶನ ಮಾಡಿದರು.

ಈ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಚಿತ್ರದುರ್ಗ ಲೋಕಸಭಾ ಸದಸ್ಯರಾದ ಗೋವಿಂದ್ ಕಾರಜೋಳರವರು ಕೇಂದ್ರ ಸರ್ಕಾರದ ನಿರ್ದೇಶನದಂತೆ 78ನೇ ಸ್ವಾತಂತ್ರ್ಯೋತ್ಸವ ಸಂದರ್ಭದಲ್ಲಿ ಆ.13 ರಿಂದ 15 ವರೆಗೆ ಹರ್‌ಘರ್‌ತಿರಂಗಾ ಅಭಿಯಾನ ರಾಷ್ಟ್ರದ್ದುದ್ದಕ್ಕೂ ಹಮ್ಮಿಕೊಳ್ಳಲಾಗಿದೆ, ಹರ್ ಘರ್ ತಿರಂಗಾ ಅಭಿಯಾನ ಕುರಿತು. ಈ ಮೂರು ದಿನಗಳ ಕಾಲ ಜಿಲ್ಲೆಯ ಪ್ರತಿಯೊಬ್ಬರು ತಮ್ಮ ಮನೆಗಳ ಮೇಲೆ ರಾಷ್ಟ್ರಧ್ವಜ ಹಾರಿಸುವ ಮೂಲಕ ರಾಷ್ಟ್ರಪ್ರೇಮ ಮೆರೆಯಬೇಕು ಎಂದು ಮನವಿ ಮಾಡಿದ್ದಾರೆ.

ನಮ್ಮ ಪೂರ್ವಜರು ಮಾಡಿದ ತ್ಯಾಗ ಬಲಿದಾನದಿಂದ ತಂದು ಕೊಟ್ಟಂತಹ ಸ್ವಾತಂತ್ರ್ಯವನ್ನು ಉಳಿಸಿ ಬೆಳಸಿಕೊಂಡು ರಾಷ್ಟ್ರ ಅಭೀವೃದ್ಧಿ ಕಾರ್ಯದಲ್ಲಿ 78 ವರ್ಷಗಳ ಕಾಲ ನಮ್ಮವರು ಪೂರ್ವಜರು ತಮ್ಮ ಹಿಂದಿನ ಪ್ರಧಾನ ಮಂತ್ರಿಗಳು ನಿರಂತರವಾಗಿ ಹೆಣಗಾಡುತ್ತಿದ್ದಾರೆ. 140ಕೋಟಿ ನಾಗರೀಕರು ಕೂಡ ಪ್ರತಿಯೊಬ್ಬರು ದೇಶಾಭೀಮಾನದಿಂದ ಈ ಕಾರ್ಯಕ್ರಮದಲ್ಲಿ ಭಾಗವಹಿಸಬೇಕಿದೆ. ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕಿದೆ ಎಂದು ಸಂಸದರು ತಿಳಿಸಿದರು.

ಆಗಸ್ಟ್ 13 ರಿಂದ 15 ರವರೆಗೆ ಜಿಲ್ಲೆಯ ಎಲ್ಲ ಗ್ರಾಮ ಪಂಚಾಯಿತಿ, ಅಂಗನವಾಡಿ ಕೇಂದ್ರ, ಶಾಲಾ–ಕಾಲೇಜು, ಸರ್ಕಾರಿ ಕಚೇರಿ, ನ್ಯಾಯಬೆಲೆ ಅಂಗಡಿ, ಸಂಘ–ಸಂಸ್ಥೆಗಳು, ಮನೆಗಳ ಮೇಲೆ ರಾಷ್ಟ್ರಧ್ವಜ ಹಾರಿಸಬೇಕು. ಧ್ವಜಾರೋಹಣ ಮಾಡುವ ಸಂದರ್ಭದಲ್ಲಿ ಬಾವುಟಕ್ಕೆ ಅಗೌರವ ತೋರಬಾರದು. ಕಡ್ಡಾಯವಾಗಿ ಧ್ವಜ ಸಂಹಿತೆಯನ್ನು ಪಾಲಿಸಬೇಕು. ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ, ಬಲಿದಾನಗಳನ್ನು ಸ್ಮರಿಸಬೇಕು. ಈ ಮೂಲಕ ಹರ್ ಘರ್ ತಿರಂಗಾ ಅಭಿಯಾನವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ನಿಕಟಪೂರ್ವ ಶಾಸಕರಾದ ಜಿ ಹೆಚ್‌ತಿಪ್ಪಾರೆಡ್ಡಿ ಮಾತನಾಡಿ, ದೇಶಕ್ಕೆ ಸ್ವಾತಂತ್ರ ಬಂದು 78 ವರ್ಷಗಳಾಗಿದೆ. ನಮ್ಮ ಜನತೆ ಬ್ರಿಟಿಷರನ್ನು ತೊಲಗಿಸಿ ದೇಶಕ್ಕೆ ಸ್ವಾತಂತ್ರ್ಯವನ್ನು ತರುವಲ್ಲಿ ಅನೇಕರು ತಮ್ಮ ಪ್ರಾಣವನ್ನು ನೀಡಿ ನಮಗೆ ಸ್ವಾತಂತ್ರ ಭಾರತವನ್ನು ನೀಡಿದ್ದಾರೆ. ಪ್ರಧಾನ ಮಂತ್ರಿಯವರು ಕರೆಯನ್ನು ನೀಡಿದ್ದಾರೆ. ಇಂದಿನಿಂದ ಮೂರು ದಿನ ಕನ್ಯಾಕುಮಾರಿಯಿಂದ ಹಿಡಿದು ಹಿಮಾಲಯದವರೆಗೂ ಪ್ರತಿಯೊಬ್ಬರ ಮನೆಯ ಮೇಲೆ ಸರ್ಕಾರಿ ಕಚೇರಿಯ ಮೇಲೆ ದೇಶದ 140 ಕೋಟಿ ಜನರ ಮನೆಯ ಮೇಲೆ ತ್ರಿವರ್ಣ ಧ್ವಜವನ್ನು ಹಾರಿಸುವುದರ ಮೂಲಕ ದೇಶ ಭಕ್ತಿಯನ್ನು ತೋರಿಸುವ ಕಾರ್ಯವನ್ನು ಮಾಡಬೇಕಿದೆ. ಇದ್ದಲ್ಲದೆ ಖಾಸಗಿಯಾಗಿಯೂ ಸಹಾ ಮನೆಯ ಮೇಲೆ ಧ್ವಜವನ್ನು ಹಾರಿಸುವ ಕಾರ್ಯವನ್ನು ಮಾಡಬೇಕಿದೆ ಎಂದರು.

ಈಸಂದರ್ಭದಲ್ಲಿಬಿಜೆಪಿಜಿಲ್ಲಾಧ್ಯಕ್ಷರಾದ ಎ ಮುರಳಿ, ಜೆಡಿಎಸ್ ಜಿಲ್ಲಾದ್ಯಕ್ಷ ಜಯ್ಯಣ್ಣ, ಪ್ರಧಾನ ಕಾರ್ಯದರ್ಶಿ ಗಳಾದ ಸುರೇಶ ಸಿದ್ದಾಪುರ, ಸಂಪತ್‌ಕುಮಾರ್, ಖಜಾಂಚಿ ಮಾಧುರಿಗೀರಿಶ್, ಮುಖಂಡರಾದ ಜಿ.ಎಸ್ ಅನಿತ್‌ಕುಮಾರ್. ಜಿ.ಪಂ. ಮಾಜಿ ಅಧ್ಯಕ್ಷರಾದ ಶ್ರೀಮತಿ ಸೌಭಾಗ್ಯಬಸವರಾಜನ್, ಕೆ. ಮಲ್ಲಿಕಾರ್ಜುನ್., ರೈತ ಮೋರ್ಚಾದ ಅಧ್ಯಕ್ಷ ವೆಂಕಟೇಶ್ ಯಾದವ್, ನಗರ ಅಧ್ಯಕ್ಷನವೀನ್‌ಚಾಲುಕ್ಯ, ಮಾಧ್ಯಮ ವಕ್ತಾರ ದಗ್ಗೆ ಶಿವಪ್ರಕಾಶ್, ಓಬವ್ವ ತಿಪ್ಪೆಸ್ವಾಮಿ, ಚಂದ್ರು, ಯಶವಂತ್ ಕುಮಾರ್, ಕಿರಣ್ ಪರುಶರಾಂ ನಗರಸಭಾ ಸದಸ್ಯರಾದ ಹರೀಶ್, ಶ್ರೀನಿವಾಸ್, ವಸಂತ ಕುಮಾರ, ಒಬಳೇಶ್ ತಿಮ್ಮಣ್ಣ ಅದ್ದೂರಿ ವೆಂಕಟೇಶ. ಪ್ರಭು, ಬಸಮ್ಮ ವೀಣಾ, ಶೀಲಾ ಶಂಭು ಸೇರಿದಂತೆ ಶಾಲಾ ವಿದ್ಯಾರ್ಥಿಗಳು ಈ ಅಭಿಯಾನದಲ್ಲಿ ಉಪಸ್ಥಿತರಿದ್ದರು

## ಫಾಸ್ಟ್ ನ್ಯೂಸ್

### ಚನ್ನಮ್ಮನಾಗತಿಹಳ್ಳಿ ಅರಣ್ಯ ಪ್ರದೇಶಕ್ಕೆ ನಿಧಿಗಳ್ಳರ ಲಗ್ಗೆ

» ಮೊದಲ ಪುಟದಿಂದ

ಇತ್ತೀಚಿಗಷ್ಟೇ ಸಮುದಾಯದ ಕೆಲ ಮುಖಂಡರು ಅಲ್ಲಿಗೆ ತೆರಳಿದಾಗ ನಿಧಿಗಳ್ಳರು ನಿಧಿಯ ಆಸೆಗಾಗಿ ಅಲ್ಲಿ ಗುಂಡಿ ತೆಗೆದಿದ್ದಲ್ಲದೆ, ನಾಗಪ್ಪ ದೇವರ ವಿಗ್ರಹವನ್ನು ಭಗ್ನಗೊಳಿಸಿದ್ದಾರೆ. ಸುದ್ದಿ ಗ್ರಾಮದಲ್ಲಿ ಹರಡಿ ಗ್ರಾಮದಿಂದ ಹಲವಾರು ಜನರು ಬಂದು ನಿಧಿಗಳ್ಳರ ಕೃತ್ಯವನ್ನು ಖಂಡಿಸಿದ್ದಾರೆ. ನಿಧಿಗಳ್ಳರ ಕಣ್ಣು ಈ ಪ್ರದೇಶದ ಮೇಲೆ ಬಿದ್ದಿರುವುದಕ್ಕೆ ಈ ಭಾಗದ ಜನರು ಭಯಭಿತರಾಗಿದ್ದಾರೆ. ಕಾರಣ, ಯಾದವ ಸಮುದಾಯದವರು ಕಳೆದ ಹಲವಾರು ವರ್ಷಗಳಿಂದ ಇಲ್ಲಿರುವ ನಾಗಪ್ಪ ದೇವರನ್ನು ಪೂಜಿಸುತ್ತಾ ಬಂದಿದ್ದಾರೆ. ಹಳೇಕಾಲದ ಕಲ್ಲಿನ ಕಟ್ಟಡದಲ್ಲಿ ನಾಗರಮೂರ್ತಿಗಳಿದ್ದು ಅವುಗಳ ರಕ್ಷಣೆಯ ಬಗ್ಗೆ ಸಮುದಾಯದ ಮುಖಂಡರು ಚಿಂತನೆಯಲ್ಲಿ ತೊಡಗಿದ್ದಾರೆ.

### 24ರಂದು ಬಿ.ಕಾಂ ಪರೀಕ್ಷೆ

» ದಾವಣಗೆರೆ

ತಾಂತ್ರಿಕ ಕಾರಣಗಳಿಂದ ಮುಂದೂಡಲಾಗಿದ್ದ ಸ್ನಾತಕ ಬಿ.ಕಾಂ (ಎನ್‌ಇಪಿ) ಪದವಿಯ ಇ–ಕಾಮರ್ಸ್ ವಿಷಯದ ಪರೀಕ್ಷೆಯನ್ನು ಆಗಸ್ಟ್ 24 ರಂದು ಬೆಳಿಗ್ಗೆ 10 ರಿಂದ 12 ಗಂಟೆ ವರೆಗೆ ನಡೆಸಲಾಗುವುದು ಎಂದು ದಾವಣಗೆರೆ ವಿಶ್ವವಿದ್ಯಾನಿಲಯ ಪರೀಕ್ಷಾಂಗ ಕುಲಸಚಿವ ಪ್ರೊ.ಸಿ.ಕೆ.ರಮೇಶ್ ತಿಳಿಸಿದ್ದಾರೆ.

### ಪ್ಲಾಸ್ಟರ್ ಆಫ್ ಪ್ಯಾರಿಸ್ ಗಣೇಶ ಮಾರಾಟ ನಿಷೇಧ

» ದಾವಣಗೆರೆ

ಗಣೇಶ ಚತುರ್ಥಿ ಅಂಗವಾಗಿ ಮಲೇಬೆನ್ನೂರು ಪುರಸಭೆ ವ್ಯಾಪ್ತಿಯಲ್ಲಿ ಪ್ಲಾಸ್ಟರ್ ಆಫ್ ಪ್ಯಾರಿಸ್‌ನಿಂದ ತಯಾರಿಸಿದ ಗಣೇಶ ವಿಗ್ರಹಗಳನ್ನು ಮಾರಾಟ ಮಾಡುವುದನ್ನು ನಿಷೇಧಿಸಲಾಗಿದೆ. ಮಾರಾಟ ಮಾಡಿದಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗುವುದು. ಹಾಗೂ ಪ್ಲಾಸ್ಟರ್ ಆಫ್ ಪ್ಯಾರಿಸ್‌ನಿಂದ ತಯಾರಿಸಿದ ಗಣೇಶ ಮೂರ್ತಿಗಳನ್ನು ವಶಪಡಿಸಿಕೊಳ್ಳಲಾಗುವುದು.

### ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

» ದಾವಣಗೆರೆ

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಿಗೆ ಸಾಮಾನ್ಯ ಪದವಿ ಮಟ್ಟದ ಕೋರ್ಸುಗಳ ವಿದ್ಯಾರ್ಥಿಗಳಿಗೆ ಮಾತ್ರ ಪ್ರವೇಶಾತಿಗೆ ಅರ್ಜಿಗಳನ್ನು ರಾಜ್ಯ ವಿದ್ಯಾರ್ಥಿ ನಿಲಯ ತಂತ್ರಾಂಶದ https://shp.karnataka.gov.in ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಹಾಗೂ ಅರ್ಹ ಅಭ್ಯರ್ಥಿಗಳು ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ, ಕುಂದುವಾಡ ರಸ್ತೆ, ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕ ವಿದ್ಯಾರ್ಥಿನಿಲಯ, ಶಿವಕುಮಾರ್ ಸ್ವಾಮಿ ಬಡಾವಣೆ, ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿನಿಲಯ, ಗುತ್ತೂರು ಕಾಲೋನಿ,ಹರಿಹರ, ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ, ಕೆರೆಬಿಳಚಿ, ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿನಿಲಯ, ಜಗಳೂರು ಟೌನ್ ಈ ವಿದ್ಯಾರ್ಥಿನಿಲಯಗಳಿಗೆ ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 12 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ :08192–250022 ಹಾಗೂ ತಾಲ್ಲೂಕು ವಿಸ್ತರಣಾಧಿಕಾರಿಗಳ ಕಛೇರಿ ದೂರವಾಣಿ : 08192–250066 ಸಂಪರ್ಕಿಸಬಹುದೆಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ಮಲ್ಲಿಕಾರ್ಜುನ್ ಮಠದ್ ತಿಳಿಸಿದ್ದಾರೆ.

### ಪ್ಲಾಸ್ಟಿಕ್ ಧ್ವಜ ಬಳಸಿದರೆ ಕಾನೂನು ಕ್ರಮ

» ದಾವಣಗೆರೆ

ಆಗಸ್ಟ್ 15 ರಂದು ಆಚರಿಸಲಿರುವ ಸ್ವಾತಂತ್ರ್ಯೋತ್ಸವ ದಿನಾಚರಣೆಯನ್ನು ಪರಿಸರ ಸಂರಕ್ಷಣೆ ಹಾಗೂ ಪರಿಸರ ಸ್ನೇಹಿಯಾಗಿ ಆಚರಿಸಲು ರಾಷ್ಟ್ರಧ್ವಜವನ್ನು ಕೈಯಿಂದ ನೂಲುವ ಮತ್ತು ಕೈಯಿಂದ ನೇಯ್ದ ಅಥವಾ ಯಂತ್ರದಿಂದ ಮಾಡಿರುವ ಹಾಗೂ ಹತ್ತಿ, ಉಣ್ಣೆ, ರೇಷ್ಮೆ ಖಾದಿಯಿಂದ ಮಾಡಿರುವ ಧ್ವಜಗಳನ್ನು ಬಳಸಬಹುದಾಗಿದೆ. ಆದರೆ ಪ್ಲಾಸ್ಟಿಕ್ ಧ್ವಜ ಬಳಸುವಂತಿಲ್ಲ, ಪ್ಲಾಸ್ಟಿಕ್ ಧ್ವಜ ಮಾರಾಟ ಮಾಡುವಂತಹ ಅಂಗಡಿ ಮಾಲೀಕರುಗಳ ವಿರುದ್ಧ ಕಾನೂನು ರೀತ್ಯಾ ಕ್ರಮಕೈಗೊಳ್ಳಲಾಗುವುದು ಎಂದು ಪರಿಸರ ಅಧಿಕಾರಿ ತಿಳಿಸಿದ್ದಾರೆ.

### ಮಹಿಳಾ ಸ್ವಸಹಾಯ ಗುಂಪುಗಳಿಗೆ ಅರ್ಜಿ

» ದಾವಣಗೆರೆ

ಪ್ರಸಕ್ತ ಸಾಲಿನ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ ಅಲ್ಪಸಂಖ್ಯಾತರ ಸಮುದಾಯದ ಮಹಿಳಾ ಸ್ವ–ಸಹಾಯ ಗುಂಪುಗಳಿಗೆ ಸಹಾಯಧನ ಯೋಜನೆಯಡಿ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಆಗಸ್ಟ್ 31 ರೊಳಗಾಗಿ ವೆಬ್‌ಸೈಟ್ https://kmdconline.karnataka.gov.in ನಲ್ಲಿ ಸಲ್ಲಿಸಬಹುದು.

---

ಬೈಕ್ ರ್‍ಯಾಲಿಗೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹಸಿರು ನಿಶಾನೆ

# ಹರ್ ಘರ್ ತಿರಂಗಾ ಬೈಕ್ ರ್‍ಯಾಲಿ

» ಚಿತ್ರದುರ್ಗ

78ನೇ ಭಾರತ ಸ್ವಾತಂತ್ರ್ಯೋತ್ಸವದ ಅಂಗವಾಗಿ ಜಿಲ್ಲಾಡಳಿತ, ನಗರಸಭೆ ವತಿಯಿಂದ "ಹರ್ ಘರ್ ತಿರಂಗಾ" ಅಭಿಯಾನದಡಿ ಚಿತ್ರದುರ್ಗ ನಗರದಲ್ಲಿ ಮಂಗಳವಾರ ಆಯೋಜಿಸಿದ್ದ ಹರ್ ಘರ್ ತಿರಂಗಾ ಬೈಕ್ ರ್‍ಯಾಲಿಗೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಚಾಲನೆ ನೀಡಿದರು.

ಹರ್ ಘರ್ ತಿರಂಗಾ ಪ್ರತಿ ಮನೆಯ ಮೇಲೆ ರಾಷ್ಟ್ರಧ್ವಜ ಹಾರಿಸಲು ಜನರಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಚಿತ್ರದುರ್ಗ ನಗರದ ಹೊಳಲ್ಕೆರೆ ರಸ್ತೆಯ ಕನಕವೃತ್ತದಲ್ಲಿ ರಾಷ್ಟ್ರಧ್ವಜದೊಂದಿಗೆ ಬೈಕ್ ರ್‍ಯಾಲಿಗೆ ಚಾಲನೆ ದೊರೆಯಿತು.

ಈ ವೇಳೆ ಮಾತನಾಡಿದ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಜನರ ಹೃದಯದಲ್ಲಿ ದೇಶಭಕ್ತಿಯ ಭಾವನೆ ಪ್ರೇರೇಪಿಸುವುದು, ಐಕ್ಯತೆ, ಭಾವೈಕ್ಯತೆ ಮತ್ತು ರಾಷ್ಟ್ರೀಯತೆಯನ್ನು ಮೈಗೂಡಿಸಿಕೊಳ್ಳಬೇಕು ಎಂಬ ನಿಟ್ಟಿನಲ್ಲಿ ಹರ್ ಘರ್ ತಿರಂಗಾ ಬೈಕ್ ರ್‍ಯಾಲಿ ಕಾರ್ಯಕ್ರಮ ಆಯೋಜಿಸಿದ್ದು, ಪ್ರತಿಯೊಬ್ಬರಲ್ಲಿಯೂ ಭಾರತ ಸ್ವಾತಂತ್ರ್ಯದ ಹಣತೆಯ ದೀಪ ಹಚ್ಚುವಂತಹ ಕಾರ್ಯ ಆಗಬೇಕಿದೆ ಎಂದು ಹೇಳಿದರು.

ನಗರಸಭೆ ಪೌರಾಯುಕ್ತೆ ಎಂ.ರೇಣುಕಾ ಮಾತನಾಡಿ, ಭಾರತ ಸ್ವಾತಂತ್ರೋತ್ಸವದ ಅಂಗವಾಗಿ "ಹರ್ ಘರ್ ತಿರಂಗಾ" ಅಭಿಯಾನವನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಬೈಕ್ ರ್‍ಯಾಲಿ, ದೇಶಭಕ್ತಿ







ಗೀತೆಗಳ ಗಾಯನ ಸೇರಿದಂತೆ ವಿವಿಧ ರೀತಿಯ ಕಾರ್ಯಕ್ರಮಗಳನ್ನು ಆಯೋಜನೆ ಮಾಡಲಾಗುತ್ತಿದ್ದು, ಆ.13 ರಿಂದ 15 ರವರೆಗೆ ಮೂರು ದಿನಗಳ ಕಾಲ ಪ್ರತಿಯೊಬ್ಬರು ತಮ್ಮ ಮನೆಗಳ ಮೇಲೆ ರಾಷ್ಟ್ರಧ್ವಜ ಹಾರಿಸುವ ಮೂಲಕ ರಾಷ್ಟ್ರಪ್ರೇಮ ಮೆರೆಯಬೇಕು ಎಂದರು.

ಚಿತ್ರದುರ್ಗ ನಗರದ ತರಾಸು ರಂಗಮಂದಿರದ ಆವರಣದಲ್ಲಿರುವ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕಚೇರಿ, ಅಂಚೆ ಕಚೇರಿ ಹಾಗೂ ರೈಲ್ವೆ ನಿಲ್ದಾಣಗಳಲ್ಲಿಯೂ ರಾಷ್ಟ್ರಧ್ವಜ ಲಭ್ಯವಿದ್ದು, ಪ್ರತಿ ಧ್ವಜಕ್ಕೆ ರೂ.26 ದರ ನಿಗದಿಪಡಿಸಲಾಗಿದೆ ಎಂದು ತಿಳಿಸಿದ ಅವರು, ಹರ್ ಘರ್ ತಿರಂಗಾ ಅಭಿಯಾನದ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಚಿತ್ರದುರ್ಗ ನಗರದ ಹೊಳಲ್ಕೆರೆ ರಸ್ತೆಯ ಕನಕವೃತ್ತದಿಂದ ಆರಂಭವಾದ ಹರ್ ಘರ್ ತಿರಂಗಾ ಬೈಕ್ ರ್‍ಯಾಲಿಯು ಸಂಗೊಳ್ಳಿ ರಾಯಣ್ಣ ವೃತ್ತ, ಗಾಂಧಿವೃತ್ತ, ಎಸ್‌ಬಿಐ ವೃತ್ತ, ಪ್ರವಾಸಿ ಮಂದಿರ ಮಾರ್ಗವಾಗಿ ಅಂಬೇಡ್ಕರ್ ವೃತ್ತ, ಮದಕರಿ ವೃತ್ತದ ಮೂಲಕ ಚಳ್ಳಕೆರೆ ಗೇಟ್ ತಲುಪಿ ನಂತರ ಪುನಃ ನಗರಸಭೆಗೆ ಆಗಮಿಸಿ ರ್‍ಯಾಲಿ ಕೊನೆಗೊಂಡಿತು.ಈ ಸಂದರ್ಭದಲ್ಲಿ ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕಿ ಸುಚೇತಾ ನೆಲವಿಗಿ, ನಗರಸಭೆ ಸದಸ್ಯರಾದ ಸುರೇಶ್, ಶಶಿಧರ್, ನಗರಸಭೆ ವ್ಯವಸ್ಥಾಪಕಿ ಮಂಜುಳಾ, ನೌಕರರ ಸಂಘದ ಅಧ್ಯಕ್ಷೆ ರೇಣುಕಾ, ಸಿದ್ದಪ್ಪ ಸಿಬ್ಬಂದಿ ಇದ್ದರು.

---



ನೂತನವಾಗಿ ಚಿತ್ರದುರ್ಗ ಜಿಲ್ಲೆಗೆ ಆಗಮಿಸಿದ ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕರಾದ ಎಂ.ಆರ್.ಮಂಜುನಾಥ ರವರನ್ನು ಹಾರ್ಧಿಕವಾಗಿ ಅಭಿನಂದಿಸಲಾಯಿತು.ಉಪಯೋಜನಾ ಸಮನ್ವಯಾಧಿಕಾರಿ ಸಿ.ವೆಂಕಟೇಶಪ್ಪ, ಚಿತ್ರದುರ್ಗ ಜಿಲ್ಲಾ ಉಪನ್ಯಾಸಕರ ಸಂಘದ ಅಧ್ಯಕ್ಷರಾದ ಬಿ.ಆರ್.ಮಲ್ಲೇಶ್, ಚಳ್ಳಕೆರೆ ತಾಲ್ಲೂಕು ಪ್ರೌಢಶಾಲಾ ಮುಖ್ಯ ಶಿಕ್ಷಕರ ಸಂಘದ ಅಧ್ಯಕ್ಷರಾದ ಡಿ.ಟಿ.ಶ್ರೀನಿವಾಸ್, ಚಳ್ಳಕೆರೆ ತಾಲ್ಲೂಕು ನೌಕರ ಸಂಘದ ಉಪಧ್ಯಾಕ್ಷ ಕೆ.ವಿ.ಚಂದ್ರಶೇಖರ್, ಸಾಹಿತಿಗಳಾದ ಡಾ.ತಿಪ್ಪೇಸ್ವಾಮಿ ಕೆರೆಯಾಗಳಹಳ್ಳಿ,ಉಪನ್ಯಾಸಕರಾದ ಎಂ.ಜೈಶ್ರೀನಿವಾಸ್ ಹಾಗೂ ಟಿ.ಪೆನ್ನಯ್ಯ ಇತರರು ಇದ್ದರು

### ಕೊಲ್ಕತ್ತಾ ಘಟನೆ ಖಂಡನೀಯ: ಡಾ.ಪಿ.ಟಿ.ವಿಜಯಕುಮಾರ್

» ಚಿತ್ರದುರ್ಗ

ಕೊಲ್ಕತ್ತಾದ ಪ್ರತಿಷ್ಠಿತ ವೈದ್ಯಕೀಯ ಕಾಲೇಜಿನಲ್ಲಿ ಅರೆ ನಗ್ನವಸ್ಥೆಯಲ್ಲಿ ಎರಡನೇ ವರ್ಷದ ಸ್ನಾತಕೋತ್ತರ ಪದವಿ ವಿದ್ಯಾರ್ಥಿನಿಯ ಶವ



ಅಧ್ಯಯನದ ಕೊಠಡಿಯಲ್ಲಿ ಪತ್ತೆಯಾಗಿರುವ ಘಟನೆಯನ್ನು ಭಾರತೀಯ ವೈದ್ಯಕೀಯ ಸಂಘದ ಚಿತ್ರದುರ್ಗ ಶಾಖೆ ಖಂಡಿಸಿದೆ.

ಕೇರಳದ ವೈದ್ಯಕೀಯ ವಿದ್ಯಾರ್ಥಿ ಜಾಕು ಇರಿತಕ್ಕೆ ತುತ್ತಾಗಿದ್ದ ಘಟನೆ ಮಾಸುವ ಮೊದಲೇ ಕೊಲ್ಕತ್ತಾದ ಪ್ರತಿಷ್ಠಿತ ಕಾಲೇಜಿನಲ್ಲಿ ಆರೇನಗ್ನವಸ್ಥೆಯಲ್ಲಿ ಎರಡನೇ ವರ್ಷದ ಸ್ನಾತಕೋತ್ತರ ಪದವಿ ವಿದ್ಯಾರ್ಥಿನಿಯ ಶವ ಅಧ್ಯಯನದ ಕೊಠಡಿ (ಸೆಮಿನರ್ ಹಾಲ್) ಯಲ್ಲಿ ಪತ್ತೆಯಾಗಿರುವುದು ಇಡೀ ಭಾರತದ ವೈದ್ಯಕುಲ ಒಂದೇ ಅಲ್ಲ ಭಾರತೀಯ ನಾಗರಿಕರೇ ತಲೆತಗ್ಗಿಸುವಂತಹ ವಿಷಯ.ಈ ಪ್ರಕರಣವನ್ನು ನಿಷ್ಪಕ್ಷಪಾತ ತನಿಖೆ ನಡೆಸಿ ಮೃತರ ಮನೆಯವರಿಗೆ ನ್ಯಾಯ ಒದಗಿಸಬೇಕು, ಆಸ್ಪತ್ರೆ ಅಥವಾ ಕಾಲೇಜಿಗಳಲ್ಲಿ ಕರ್ತವ್ಯ ನಿರ್ವಹಿಸುವ ಹಿರಿಯ ವೈದ್ಯರು ಹಾಗೂ ಕಿರಿಯ ವೈದ್ಯರಿಗೆ ಸೂಕ್ತ ರಕ್ಷಣೆ ಜೊತೆಗೆ ಅವರು 24 ಗಂಟೆ ಕರ್ತವ್ಯ ನಿರ್ವಹಿಸುವಾಗ ವಿಶ್ರಾಂತಿ ಕೊಠಡಿಗಳನ್ನು ಸುಸಜ್ಜಿತವಾಗಿ ಒದಗಿಸವಂತೆ ಸರ್ಕಾರವನ್ನು ಭಾರತೀಯ ವೈದ್ಯಕೀಯ ಸಂಘ ಚಿತ್ರದುರ್ಗ ಶಾಖೆ ಆಗ್ರಹಿಸಿದೆ.

ಕೃತ್ಯದ ತನಿಖೆ ವಿಳಂಬವಾದಲ್ಲಿ ಹಾಗೂ ಆಸ್ಪತ್ರೆಗಳಲ್ಲಿ ವೈದ್ಯರ ರಕ್ಷಣೆಯಲ್ಲಿ ವ್ಯತ್ಯಯವಾದಲ್ಲಿ ಭಾರತೀಯ ವೈದ್ಯಕೀಯ ಸಂಘವು ರಾಷ್ಟ್ರವ್ಯಾಪ್ತಿ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಭಾರತೀಯ ವೈದ್ಯಕೀಯ ಸಂಘದ ಚಿತ್ರದುರ್ಗ ಶಾಖೆಯ ಅಧ್ಯಕ್ಷರಾದ ಡಾ.ಪಿ.ಟಿ.ವಿಜಯಕುಮಾರ್. ಕಾರ್ಯದರ್ಶಿ ಡಾ.ಕೆ.ಎಂ.ಬಸವರಾಜ್ ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದಾರೆ.

### ಆ.14ರಂದು ತಿರಂಗಾ ಯಾತ್ರೆ

**ಚಿತ್ರದುರ್ಗ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಇದೇ ಆಗಸ್ಟ್ 14ರಂದು ಬೆಳಿಗ್ಗೆ 9ಕ್ಕೆ "ತಿರಂಗಾ ಯಾತ್ರೆ" ಜಾಥಾ ಕಾರ್ಯಕ್ರಮ ಆಯೋಜಿಸಲಾಗಿದೆ. ಜಾಥಾವು ನಗರದ ಒನಕೆ ಓಬವ್ವ ವೃತ್ತದಿಂದ ಪ್ರಾರಂಭವಾಗಿ ಮದಕರಿನಾಯಕ ವೃತ್ತದ ಮಾರ್ಗವಾಗಿ ನೀಲಕಂಠೇಶ್ವರ ದೇವಸ್ಥಾನದವರೆಗೆ ಜಾಥಾ ಕಾರ್ಯಕ್ರಮ ನಡೆಯಲಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್ ತಿಳಿಸಿದ್ದಾರೆ.

### ಅಗ್ನಿಪಥ್ ನೇಮಕಾತಿ

**ದಾವಣಗೆರೆ:** 2024 ನೇ ಸಾಲಿನ ಅಗ್ನಿಪಥ್ ಯೋಜನೆಯಡಿ ವಿವಿಧ ಹುದ್ದೆಗಳಿಗೆ ಲಿಖಿತ ಪರೀಕ್ಷೆಯಲ್ಲಿ ಆಯ್ಕೆಗೊಂಡ ಅಭ್ಯರ್ಥಿಗಳಿಗೆ ದೈಹಿಕ ಹಾಗೂ ವೈದ್ಯಕೀಯ ಪರೀಕ್ಷೆಯನ್ನು ಆಗಸ್ಟ್. 22 ರಿಂದ 31 ರವರೆಗೆ ಶಿವಮೊಗ್ಗ ನಗರದ ನೆಹರು ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದೆ. ಆಭ್ಯರ್ಥಿಗಳ ಪ್ರವೇಶ ಪತ್ರ ಅಭ್ಯರ್ಥಿಗಳ ಇ–ಮೇ ಲ್‌ಗೆ ಕಳುಹಿಸಲಾಗಿದೆ.

---

**ಪ್ರಮುಖ ಸುದ್ದಿ**

# ಮಠಗಳಿಗೆ ಅನುದಾನ ನೀಡುವಲ್ಲಿಯೂ ಸರ್ಕಾರ ತಾರತಮ್ಯ

» ಚಿತ್ರದುರ್ಗ

ಸರ್ಕಾರ ಮಠಗಳಿಗೆ ಅನುದಾನವನ್ನು ನೀಡುವಾಗ ತಾರತಮ್ಯವನ್ನು ಮಾಡುತ್ತಿದೆ ರಾಜ್ಯದಲ್ಲಿ ಹಲ;ವಾರು ಮಠಗಳಿಂದ ಇದರಲ್ಲಿ ಕೆಲವೇ ಮಠಗಳಿಗೆ ಮಾತ್ರ ಅನುದಾನವನ್ನು ನೀಡುತ್ತಿದೆ, ಇನ್ನೂ ಹಲವಾರು ಮಠಗಳನ್ನು ಕಣ್ಣೆತ್ತು ಸಹಾ ನೋಡುತ್ತಿಲ್ಲ ಎಂದು ಅತೀ ಹಿಂದುಳಿದ ಮಠಾಧೀಶರ ಮಹಾ ಸಭಾದ ಸಂಸ್ಥಾಪಕ ರಾಜ್ಯಾಧ್ಯಕ್ಷರಾದ ಶ್ರೀ ಪ್ರಣವಾನಂದರಾಮ್ ಸ್ವಾಮಿ ಸರ್ಕಾರವನ್ನು ಆರೋಪಿಸಿದ್ದಾರೆ.

ಚಿತ್ರದುರ್ಗ ನಗರದ ಪತ್ರಕರ್ತರ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾಡಿನಲ್ಲಿ ಹಲವಾರು ಮಠಗಳಿ ಇವೆ ಇವುಗಳು ಸಹಾ ಸಮಾಜದ ಸೇವೆಯನ್ನು ಮಾಡುತ್ತಿವೆ, ಜನರಿಗೆ ಶಿಕ್ಷಣ, ಧರ್ಮ ಪಾಲನೆಯನ್ನು ಮಾಡುತ್ತಿವೆ ಆದರೆ ಸರ್ಕಾರ ಇವುಗಳ ಕಡೆಗೆ ನೋಡುತ್ತಿಲ್ಲ, ಬರೇ ಇತರೆ ಶ್ರೀಮಂತ ಮಠಗಳಿಗೆ ಅನುದಾನವನ್ನು ಹಲವಾರು ಬಾರಿ ನೀಡುತ್ತಿದೆ. ಇದರ ಬಗ್ಗೆ ಮುಖ್ಯಮಂತ್ರಿಗಳು ಸಚಿವರು ಗಮನ ನೀಡಬೇಕಿದೆ, ಅತಿ ಹಿಂದುಳಿದ ಸಮುದಾಯಗಳಿಗೆ ಆರ್ಥಿಕವಾಗಿ, ಸಾಮಾಜಿಕವಾಗಿ, ರಾಜಕೀಯವಾಗಿ ನ್ಯಾಯ ಸಿಗುತ್ತಿಲ್ಲ...ಚುನಾವಣಾ ಪೂರ್ವದಲ್ಲಿ ನಮಗೆ ಸಾಮಾಜಿಕ ನ್ಯಾಯ ನೀಡುತ್ತೇವೆ ಎಂದು ಹೇಳುತ್ತಾರೆ ಆದರೆ ಚುನಾವಣೆ ನಂತರ ನಮ್ಮ ಸಮುದಾಯಕ್ಕೆ ಯಾವುದೇ ನ್ಯಾಯ ನೀಡುತ್ತಿಲ್ಲ...ಈ ಮಹಾಸಭಾ ದ ಉದ್ದೇಶ ಯಾವುದೇ ವ್ಯಕ್ತಿಯ ವಿರುದ್ಧ ಅಥವಾ ರಾಜಕೀಯ



ಪಕ್ಷದ ವಿರುದ್ಧವಾಗಿ ಅಲ್ಲ ಎಂದರು.

ಈಗಿನ ಸರ್ಕಾರ ಪರಿಶಿಷ್ಟ ಜಾತಿ ಮತ್ತು ಪಂಗಡದ ಅಭೀವೃದ್ದಿ ಇಟ್ಟಿದ್ದ ಅನುದಾನವನ್ನು ಬೇರೆದಕ್ಕೆ ಉಪಯೋಗ ಮಾಡಿದ್ದಾರೆ ಇದು ಸರಿಐಆದ ಕ್ರಮವಲ್ಲ, ಇವರಿಗಾಗಿ ಇಟ್ಟಿದ್ದ ಅನುದಾನವನ್ನು ಇವರ ಅಭೀವೃದ್ದಿಗೆ ಬಳಕೆ ಮಾಡಬೇಕು ಇದು ಬಿಟ್ಟಿ ನಿಮ್ಮ ಗ್ಯಾರೆಂಟಿಗಳಿಗೆ ನಮ್ಮ ಅನುದಾನವನ್ನು ಬಳಕೆ ಮಾಡುವುದು ಸರಿಯಲ್ಲ ಅಲ್ಲದೆ ನಮ್ಮಂತಹ ಬಡ ಮಠಗಳಿಗೂ ಸಹಾ ಸರ್ಕಾರದ ಅನುದಾನವನ್ನು ನೀಡುವಂತೆ ಆಗಬೇಕು ಎಂದು ಸರ್ಕಾರವನ್ನು ಒತ್ತಾಯಿಸಿ ಬಿಜೆಪಿಯವರು ಮತ ಜಾತಿ– ಮಠ– ಮಂದಿರದ ಮೇಲೆ ಅಧಿಕಾರಕ್ಕೆ ಬರುತ್ತಾರೆ.. ಕಾಂಗ್ರೆಸ್ನವರು ನಾವು ಸಾಮಾಜಿಕ ನ್ಯಾಯ ನೀಡುತ್ತೇವೆ ಅಂತೇಳಿ ಅಧಿಕಾರಕ್ಕೆ ಬಂದಿದ್ದೀರಿ ಆದರೆ ನೀವು ಏನು ಮಾಡಿದ್ದೀರಿ...? ಹಿಂದುಳಿದ ವರ್ಗಗಳ ಹಣವನ್ನು ದುರುಪಯೋಗ ಮಾಡಿದ್ದೀರಿ ಎಂದರು.ರಾಜ್ಯದಲ್ಲಿ ಅತೀ ಹಿಂದುಳಿದ ಸಮುದಾಯವನ್ನು ರಾಜಕೀಯ ಪಕ್ಷಗಳು ಕಡೆಗಣಿಸುತ್ತಿವೆ... ಅತಿ ಹಿಂದುಳಿದ ಸಮುದಾಯದ ಕೆಲವು ನಾಯಕರನ್ನು ಮೂಲೆಗುಂಪಾಗಿ ಮಾಡಿದ್ದಾರೆ. ರಾಜ್ಯದ ಮುಖ್ಯಮಂತ್ರಿಗಳು ಸಹ ಹಿಂದುಳಿದ ಸಮುದಾಯದವರೇ ಇದ್ದಾರೆ.. ಎರಡು ಬಜೆಟ್ ಮಂಡಿಸಿದರು ಸಹ ಹಿಂದುಳಿದ ವರ್ಗಗಳಿಗೆ ನ್ಯಾಯ ಸಿಗುತ್ತಿಲ್ಲ. ಆಡಳಿತ ನಮ್ಮ ಪರವಾಗಿ ಆಗುತ್ತಿಲ್ಲ ಎಂದರು.

ಇತ್ತೀಚೆಗೆ ಸಾಣೇಹಳ್ಳಿಯ ಶ್ರೀ ಪಂಡಿತಾರಾಧ್ಯ ಶ್ರೀಗಳು ಒಂದು ಧರ್ಮದ ಬಗ್ಗೆ ಅವಹೇಳನಕಾರಿ ಮಾತನ್ನು ಆಡಿದ್ದಾರೆ ಇದು ತಮಗೆ ಶೋಭೆಯನ್ನು ತರುವಂತಹದ್ದಲ್ಲ. ಎಲ್ಲರು ಎಲ್ಲಾ ಧರ್ಮವನ್ನು ಗೌರವಿಸಬೇಕಿದೆ ಒಂದು ಧರ್ಮವನ್ನು ಹೋಗಳುವುದು ಮತ್ತೊಂದು ಧರ್ಮವನ್ನು ತೆಗಳುವ ಕಾರ್ಯವನ್ನು ಮಾಡಬಾರದು ತಮ್ಮ ಈ ಮಾತನ್ನು ವಾಪಾಸ್ಸ್ ಪಡೆಯುವಂತೆ ಶ್ರೀ ಪ್ರಣವಾನಂದರಾಮ್ ಸ್ವಾಮಿ ಒತ್ತಾಯಿಸಿದರು

ಅತೀ ಹಿಂದುಳಿದ ಮಠಾಧೀಶರ ಮಹಾ ಸಭಾದ ಸಂಸ್ಥಾಪಕ ರಾಷ್ಟ್ರೀಯ ಅಧ್ಯಕ್ಷರಾದ ಶ್ರೀ ಬಸವನಾಗಿದೇವ ಶ್ರೀಗಳು ಮಾತನಾಡಿ, ಸರ್ಕಾರಗಳು ನಮ್ಮ ಅತೀ ಹಿಂದುಳಿದ ಮಠಗಳನ್ನು ಕಡೆಗಣಿಸುತ್ತಿದೆ ನಮ್ಮ ಬಗ್ಗೆ ತಾತ್ಸಾರ ಮನೋಭಾವ ಮಾಡುತ್ತಿದೆ ಇದು ಸರಿಯಾದ ರೀತಿಯಲ್ಲ ಎಲ್ಲಾ ಮಠಗಳನ್ನು ನೋಡಿದಂತೆ ನಮ್ಮ ಮಠಗಳನ್ನು ಸಹಾ ನೋಡಿ ಅನುದಾನವನ್ನು ನೀಡಿ ಇದರ ಬಗ್ಗೆ ಚರ್ಚೆ ನಡೆಸುವ ಸಲುವಾಗಿ ಆ. 18 ರಂದು ಚಿತ್ರದುರ್ಗದಲ್ಲಿ ಸಭೆಯನ್ನು ಸಹಾ ನಡೆಸಲಾಗುತ್ತಿದೆ ಇದರಲ್ಲಿ ವಿವಿಧ ಸಮಾಜದ ಮುಖಂಡರು ಭಾಗವಹಿಸಲಿದ್ದಾರೆ, ನಮ್ಮ ಜನತೆಯಲ್ಲಿ ಇದರ ಬಗ್ಗೆ ಜಾಗೃತಿಯನ್ನು ಮೂಡಿಸಬೇಕಿದೆ. ನಾವುಗಳು ಸಂವಿಧಾನದ ಅಡಿಯಲ್ಲಿ ಕೆಲಸವನ್ನು ಮಾಡುತ್ತಿದ್ದೇವೆ, ನಮಗೂ ಸಹಾ ಸಂವಿಧಾನದ ಸೌಲಭ್ಯ ಪಡೆಯುವ ಹಕ್ಕು ಇದೆ ಎಂದರು.

ಅತೀ ಹಿಂದುಳಿದ ಮಠಾಧೀಶರ ಮಹಾ ಸಭಾದ ರಾಜ್ಯ ಪ್ರಧಾನ ಕಾರ್ಯದರ್ಶಿ ಶ್ರೀ ಸೇವಾಲಾಲ್ ಸರ್ದಾರ್ ಸ್ವಾಮಿಜಿ ಮಾತನಾಡಿ, ರಾಜ್ಯದ 16 ಸಮುದಾಯ ವಿವಿಧ ಮಠಾಧೀಶರು ಸೇರಿಕೊಂಡು 2025ರಲ್ಲಿ ಸಮಾವೇಶವನ್ನು ನಡೆಸುವ ಉದ್ದೇಶದಿಂದ ಪೂರ್ವಬಾವಿ ಸಭೆಯನ್ನು ಕರೆಯಲಾಗಿದೆ ಇದರಲ್ಲಿ ಬಿಕೆಹರಿಪ್ರಸಾದ್, ವಾಣೀ ಶಿವರಾಂ. ನಂಜುಂಡಿ, ರವಿಕುಮಾರ್, ಲೋಹಿತ್ ವೈ ಕಲ್ಲೂರು ಸೇರಿದಂತೆ ಇತರೆ ಮುಖಂಡರು ಭಾಗವಹಿಸಲಿದ್ದಾರೆ ಈ ಸಭೆಯಲ್ಲಿ ಸಮಾವೇಶದ ಅಂಗವಾಗಿ ವಿವಿಧ ಸಮಿತಿಗಳನ್ನು ರಚನೆ ಮಾಡುವುದ್ದಲ್ಲದೆ ಸಮಾವೇಶವನ್ನು ಎಲ್ಲಿ ಮತ್ತು ಯಾವಾಗ ನಡೆಸಬೇಕು ಎಂದು ತೀರ್ಮಾನವನ್ನು ಮಾಡಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ರಾಜ್ಯದ ಅತಿ ಹಿಂದುಳಿದ ವರ್ಗಗಳ ರಾಜಕೀಯ, ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ವಿಷಯಗಳನ್ನು ಸಂವಿಧಾನಾತ್ಮಕವಾಗಿ ಅತಿ ಹಿಂದುಳಿದ ವರ್ಗಗಳಿಗೆ ತಲುಪಿಸುವುದರ ಬಗ್ಗೆ ಜಾಗೃತಿ ಮತ್ತು ಯೋಜನೆ..ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿಯೂ ಅತಿ ಹಿಂದುಳಿದ ವರ್ಗಗಳ ಜಿಲ್ಲಾ ಹಾಗೂ ತಾಲೂಕು, ಗ್ರಾಮ ಘಟಕಗಳ ಸಮಿತಿ ರಚನೆ ಅಂಬೇಡ್ಕರ್ ರವರ ಕನಸು ನನಸು ಮಾಡುವುದಕ್ಕೆ ಮನೆ–ಮನೆಗಳಲ್ಲಿಯೂ ಸಂವಿಧಾನದ ಬಗ್ಗೆ ಅರಿವು ಬಗ್ಗೆ ಚರ್ಚೆ ಮಾಡಲಿದ್ದೇವೆ.

# ಮಕ್ಕಳ ಮೇಲೆ ಅತ್ಯಾಚಾರ, ದೌರ್ಜನ್ಯವೆಸಗುವ ವ್ಯಕ್ತಿಗಳನ್ನು ಕಾನೂನು ಕುಣಿಕೆಗೆ ಸಿಲುಕಿಸಿ: ನ್ಯಾ.ಶಮೀರ್

» ಚಳ್ಳಕೆರೆ



ಮುಗ್ಧ ಮಕ್ಕಳ ಮೇಲೆ ನಡೆಯುವ ಪೋಕ್ಸೋ, ಬಾಲ್ಯವಿವಾಹದಂತಹ ಪ್ರಕರಣಗಳನ್ನು ತಡೆಯಲು ಎಲ್ಲಾ ಇಲಾಖೆಗಳು ಸಮರೋಪಾದಿಯಲ್ಲಿ ಕಾರ್ಯನಿರ್ವಹಿಸಿ ಎಂದು ಸಿವಿಲ್ ನ್ಯಾಯಾಲಯದ ಹಿರಿಯ ನ್ಯಾಯಾಧೀಶ ಶಮೀರ್ ಪಿ.ನಂದ್ಯಾಲ್ ತಿಳಿಸಿದರು.

ಅವರು, ಮಂಗಳವಾರ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮಕ್ಕಳ ಕಲ್ಯಾಣ ಇಲಾಖೆ, ಜಿಲ್ಲಾ ಪಂಚಾಯಿತಿ ಸಂಯುಕ್ತವಾಗಿ ಆಯೋಜಿಸಿದ್ದ ಪೋಕ್ಸೋ ಕಾಯ್ದೆ, ಬಾಲ್ಯವಿವಾಹ ನಿಷೇದ ಕಾಯ್ದೆ ಹಾಗೂ ಮಕ್ಕಳ ರಕ್ಷಣೆ ಕಾಯ್ದೆ ಕುರಿತು ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಆಯೋಜಿಸಿದ್ದ ಒಂದು ದಿನದ ತರಬೇತಿ ಕಾರ್ಯಗಾರವನ್ನು ಉದ್ಘಾಟಿಸಿ ಮಾತನಾಡಿದರು. ಏನು ಅರಿಯದ ಮುಗ್ದರಿಗೆ ಬಾಲ್ಯ ವಿವಾಹ ಮಾಡುವ ಮೂಲಕ ದಾರಿ ತಪ್ಪಿಸುವ ಕೆಲಸ ನಡೆಯುತ್ತಿದೆ. ಮಕ್ಕಳ ಯಾವುದೇ ಕಾರಣಕ್ಕೂ ಅಹಿತಕರ ಘಟನೆಗೆ ಸಿಲುಕದಂತೆ ರಕ್ಷಿಸಬೇಕಿದೆ. ಎಲ್ಲಾ ಕಾರ್ಯಗಳನ್ನು ಶ್ರದ್ಧೆ, ಸಂಯಮದಿಂದ ಎಲ್ಲರೂ ನಿರ್ವಹಿಸಬೇಕು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಯುನಿಸೆಫ್ ಮಕ್ಕಳ ಸಂರಕ್ಷಣಾ ಯೋಜನೆ ಪ್ರಾದೇಶಿಕ ಸಂಯೋಜಕ ರಾಘವೇಂದ್ರಭಟ್, ಕಾನೂನಿನ ಬಿಗಿಕಪಿಮುಷ್ಠಿಯಿಂದ ಪಾರಾಗುವವರ ಸಂಖ್ಯೆ ಹೆಚ್ಚುತ್ತಿದೆ. ಅನೇಕ ಸಂದರ್ಭಗಳಲ್ಲಿ ಮಕ್ಕಳ ಮೇಲೆ ನಡೆಯುವ ದೌರ್ಜನ್ಯಗಳ ಪ್ರಕರಣಗಳ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಾರದೆ ನಿರ್ಲಕ್ಷ್ಯ ವಹಿಸಲಾಗುತ್ತಿದೆ. ನಮ್ಮಲ್ಲಿರುವ ಕಾನೂನಿಗೆ ಎಲ್ಲಾ ವಿಶೇಷ ಶಕ್ತಿ, ಸಾಮರ್ಥ್ಯವಿದೆ. ಕಾನೂನು ಮೀರಿ ಯಾರೇ ದೌರ್ಜನ್ಯವೆಸಗಿದರೂ ಅವರಿಗೆ ಶಿಕ್ಷೆ ಖಚಿತವಾದರೆ ಮಾತ್ರ ಇಂತಹ ಪ್ರಕರಣಗಳನ್ನು ನಿಯಂತ್ರಿಸಲು ಎಲ್ಲರ ಸಹಕಾರ ಮುಖ್ಯ ಎಂದರು.

ಜೆಎಂಎಫ್‌ಸಿ ನ್ಯಾಯಾಧೀಶೆ ಎಚ್. ಆರ್.ಹೇಮಾ ,ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷ ಕೆ.ಎಂ.ನಾಗರಾಜು ಮಾತನಾಡಿದರು.

ಜಿಲ್ಲಾ ಮಕ್ಕಳ ಕಲ್ಯಾಣ ಅಧ್ಯಕ್ಷ ಡಾ.ಎನ್.ಪ್ರಭಾಕರ, ಜಿಲ್ಲಾ ಮಕ್ಕಳ ರಕ್ಷಣಾ ಇಲಾಖೆ ಸಿ.ಸವಿತಾ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಜಿಲ್ಲಾ ಉಪನಿರ್ದೇಶಕಿ ಭಾರತಿ ಆರ್.ಬಣಕರ್, ಡಿ.ಕೆ.ಶೀಲಾ, ಬಸವರಾಜು, ಸುಮನ ಎಸ್.ಅಂಗಡಿ, ಮಧುಕುಮಾರ್, ಬಿಇಒ ಕೆ.ಎಸ್.ಸುರೇಶ್, ಸಿಡಿಪಿಒ ಹರಿಪ್ರಸಾದ್, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಎನ್. ಕಾಶಿ, ತಾಲ್ಲೂಕು ಪಂಚಾಯಿತಿ ಎಇಒ ಸಂಪತ್‌ಕುಮಾರ್ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಬಾಂಗ್ಲದೇಶದ ಹಿಂದೂಗಳ ಮೇಲೆ ದೌರ್ಜನ್ಯ: ಖಂಡಿಸಿ ಚಳ್ಳಕೆರೆಯಲ್ಲಿ ಪಂಜಿನ ಮೆರವಣಿಗೆ

» ಚಳ್ಳಕೆರೆ




ಆ.7ರಂದು ಬಾಂಗ್ಲಾದೇಶದಲ್ಲಿ ಅಲ್ಲಿನ ಮತಿಯ ಶಕ್ತಿಗಳು ದಂಗೆ ಎದ್ದು ಹಿಂದೂಗಳ ದೇವಸ್ಥಾನ ಹಾಗೂ ಹಿಂದೂಗಳನ್ನು ಗುರಿಯಾಗಿಸಿಕೊಂಡು ಅವರ ಅಪಾರಪ್ರಮಾಣದ ಆಸ್ತಿ, ಮಾನ, ಪ್ರಾಣಗಳನ್ನು ಹಾನಿ ಮಾಡಿದ ಬಗ್ಗೆ ಹಿಂದೂ ಜಾಗರಣ ವೇದಿಕೆಯಿಂದ ನೆಹರೂ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸುವ ಪ್ರತಿಭಟಿಸಲಾಯಿತು.

ಇದೇ ಸಂದರ್ಭದಲ್ಲಿ ರಾಷ್ಟ್ರ ಸ್ವಾತಂತ್ರ್ಯ ಪಡೆದ 1947ರಲ್ಲಿ ದೇಶ ವಿಭಜನೆ ಮೂಲಕ ದೇಶವನ್ನು ಮೂರು ಭಾಗಗಳಾಗಿ ಪರಿವರ್ತನೆ ಮಾಡಿದ ಘಟನೆಯನ್ನು ಸಹ ಭಜರಂಗದಳ ಹಾಗೂ ವಿಶ್ವಹಿಂದೂಪರಿಷತ್ ಸಂಯುಕ್ತಾಶ್ರಯದಲ್ಲಿ ಪಂಜಿನ ಮೆರವಣಿಗೆ ಮೂಲಕ ಖಂಡಿಸಲಾಯಿತು.

ಭಜರಂಗದಳದ ಶಿವಮೊಗ್ಗ ವಿಭಾಗೀಯ ಸಂಚಾಲಕ ರಾಜೇಶ್‌ಗೌಡ ಮಾತನಾಡಿ, ಕಳೆದ ಸಾವಿರಾರು ವರ್ಷಗಳಿಂದ ಭಾರತ ಮಾತೆಯ ಸೇವಕರಾಗಿ ನಾವೆಲ್ಲರೂ ಕಾರ್ಯನಿರ್ವಹಿಸುತ್ತಿದ್ದೇವೆ. ಭಾರತ ಮಾತೆ ನಮ್ಮೆಲ್ಲರಿಗೂ ಆದರ್ಶಪ್ರಾಯರು. ಭಾರತ ಮಾತೆಯ ಸ್ವಾಭಿಮಾನಕ್ಕೆ ದಕ್ಕೆ ತರುವ ಯಾವುದೇ ವಿಷಯವಿದ್ದರೂ ಅದನ್ನು ನಾವು ಖಂಡಿಸಲೇಬೇಕು. ಅಖಂಡ ಭಾರತದ ಕನಸನ್ನು ನನಸು ಮಾಡುವ ನಿಟ್ಟಿನಲ್ಲಿ ನಾವೆಲ್ಲರೂ ಸಂಕಲ್ಪ ಮಾಡಬೇಕು. ಬಾಂಗ್ಲದೇಶದಲ್ಲಿ ಹಿಂದೂಗಳ ಮೇಲೆ ನಡೆಯುತ್ತಿರುವ ಘನಘೋರ ಹತ್ಯೆಯನ್ನು ನಿಯಂತ್ರಿಸಲು ಕೇಂದ್ರ ಸರ್ಕಾರ ಸೇನೆಯನ್ನು ನಿಯೋಜಿಸಬೇಕು. ಹಿಂದೂಗಳ ರಕ್ಷಣೆ ಆದ್ಯ ಕರ್ತವ್ಯವಾಗಬೇಕು ಎಂದರು. ಬಾಂಗ್ಲದೇಶದಲ್ಲಿ ವಾಸಿಸುವ ಹಿಂದೂಗಳಿಗೆ ಪೂರ್ಣಪ್ರಮಾಣದ ರಕ್ಷಣೆ ನೀಡುವುದರೊಂದಿಗೆ ಅವರಿಗೆ ಆಗಿರುವ ಆಸ್ತಿಪಾಸ್ತಿ ಹಾನಿಯನ್ನು ಸಹ ಕೇಂದ್ರ ಸರ್ಕಾರ ನೀಡಿ ಶಾಂತಿ ನೆಲೆಸುವಂತೆ ಮಾಡಬೇಕೆಂದರು.

ವಿಶ್ವಹಿಂದೂಪರಿಷತ್ ತಾಲ್ಲೂಕು ಅಧ್ಯಕ್ಷ ಡಾ.ಡಿ.ಎನ್.ಮಂಜುನಾಥ, ನಗರ ಘಟಕದ ಅಧ್ಯಕ್ಷ ಕೆ.ಎಂ.ಯತೀಶ್, ಭಜರಂಗದಳದ ಜಿಲ್ಲಾ ಸಹ ಸಂಯೋಜಕ ಬಾಲಕೃಷ್ಣ, ಉಮೇಶ್, ಮಹಂತೇಶ್, ಸಿದ್ದೇಶ್, ಈಶ್ವರನಾಯಕ, ದುಗ್ಗಾವರರಂಗಣ್ಣ, ನಗರಂಗೆರೆ ಮಹಂತೇಶ್, ಎಂ.ಎಸ್.ವಿಶ್ವನಾಥ, ಮಧುಮತಿ, ಮಾರುತಿ, ಈರಣ್ಣ ಮುಂತಾದವರು ಭಾಗವಹಿಸಿದ್ದರು.

# ನರೇಗಾ ಕಾಮಗಾರಿ ಅನಷ್ಠಾನದಲ್ಲಿ ಯಂತ್ರಗಳನ್ನು ಬಳಸದಂತೆ ಎಚ್ಚರಿಕೆ: ಕೇಂದ್ರ ಅಧಿಕಾರಿ ಘನಶಾಮ್‌ಮೀನಾ





» ಚಳ್ಳಕೆರೆ

ಗ್ರಾಮೀಣ ಭಾಗದ ಕೂಲಿಕಾರ್ಮಿಕರಿಗೆ ಮಹಾತ್ಮಗಾಂಧಿ ಉದ್ಯೋಗ ಖಾತರಿ ಯೋಜನೆಯಡಿಯ ನರೇಗಾ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿ ಮಾನವ ದಿನಗಳನ್ನು ನಿರ್ಮಿಸಿ ಕೂಲಿಕಾರ್ಮಿಕರ ಬದುಕಿಗೆ ಆಸರೆಯಾಗುವ ಯೋಜನೆಯನ್ನು ಜವಾಬ್ದಾರಿಯುತವಾಗಿ ಅನುಷ್ಠಾನಗೊಳಿಸಬೇಕೆಂದು ನರೇಗಾ ಯೋಜನೆಯ ಕೇಂದ್ರ ತನಿಖಾ ತಂಡದ ಮುಖ್ಯಸ್ಥ ಘನಶಾಮ್‌ಮೀನಾ ತಿಳಿಸಿದರು.

ಅವರು, ಮಂಗಳವಾರ ತಾಲ್ಲೂಕಿನ ಹಿರೇಹಳ್ಳಿ ಗ್ರಾಮದ ಈಶ್ವರಪ್ಪನವರ ಮಟ್ಟಿ ಹಿಂಭಾಗದ ಗೋಕಟ್ಟೆಯಲ್ಲಿ ಹೂಳು ತುಂಬಿದ್ದು ಸುಮಾರು 4.75 ಲಕ್ಷ ವೆಚ್ಚದಲ್ಲಿ ಕಾಮಗಾರಿ ಅನುಷ್ಠಾನಗೊಂಡಿದ್ದು ಹಲವಾರು ಕಾರ್ಮಿಕರು ಇದರಲ್ಲಿ ಭಾಗವಹಿಸಿದ್ದ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ತಿಪ್ಪಮ್ಮಯ್ಯನಹಳ್ಳಿ ಗ್ರಾಮದ ರಸ್ತೆ ಬದಿ ನೀರಿನ ತೊಟ್ಟಿಯನ್ನು ನಿರ್ಮಿಸಲಾಗುತ್ತಿದ್ದು ಅದನ್ನು ಪರಿಶೀಲನೆ ನಡೆಸಿ ಎಷ್ಟು ಜನ ಕೂಲಿಕಾರ್ಮಿಕರು ಇದ್ದಲ್ಲಿ ಭಾಗವಹಿಸಿದ್ದಾರೆ. ಎಷ್ಟು ದಿನಗಳ ಕೆಲಸ ಎಂದು ಪರಿಶೀಲನೆ ನಡೆಸಿದರು. ಇದೇ ಸಂದರ್ಭದಲ್ಲಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗೆ ಸೂಚನೆ ನೀಡಿ ಅವರು, ನರೇಗಾ ಕಾಮಗಾರಿಯಲ್ಲಿ ಯಾವುದೇ ಕಾರಣಕ್ಕೂ ಯಂತ್ರ ಉಪಯೋಗಿಸದಂತೆ ಎಚ್ಚರಿಕೆ ವಹಿಸಬೇಕು ಎಂದರು.ಯೋಜನಾಧಿಕಾರಿ ರಂಜುತುಳಸಿಪುತ್ರ ಮಾತನಾಡಿ, ನರೇಗಾ ಯೋಜನೆಯಡಿ ಯಾವುದೇ ಕಾಮಗಾರಿ ಅನುಷ್ಠಾನಗೊಳಿಸಿದರೂ ಅದರ ಪೂರ್ಣಪ್ರಮಾಣದ ಫಲವನ್ನು ಕೂಲಿಕಾರ್ಮಿಕರು ಪಡೆಯಬೇಕಿದೆ. ಕೇಂದ್ರ ಸರ್ಕಾರ, ರಾಜ್ಯ ಸರ್ಕಾರದ ಸಹಯೋಗದೊಂದಿಗೆ ಈ ಮಹತ್ತರ ಯೋಜನೆ ಜಾರಿಗೆ ತರುವ ಮೂಲಕ ಗ್ರಾಮೀಣ ಭಾಗದ ಬಡ ಕೂಲಿಕಾರ್ಮಿಕರಿಗೆ ಆಸರೆಯಾಗಿದೆ. ಇತ್ತೀಚಿನ ದಿನಗಳಲ್ಲಿ ಮತ್ತೆ ಮಳೆ ವೈಪಲ್ಯವಾಗಿದ್ದು, ಬಹುತೇಕ ಎಲ್ಲಾ ಜನರು ನರೇಗಾ ಕಾಮಗಾರಿಯ ಬಗ್ಗೆ ಆಸಕ್ತಿ ವಹಿಸಿದ್ದಾರೆ ಎಂದರು.

# ಹರ್ ಘರ್ ತಿರಂಗಾ ಅಭಿಯಾನದ ಅಂಗವಾಗ ಗೀತ ಗಾಯನ

» ದಾವಣಗೆರೆ

ಹರ್ ಘರ್ ತಿರಂಗಾ ಅಭಿಯಾನದ ಅಂಗವಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಸಂಗೊಳ್ಳಿ ರಾಯಣ್ಣ ವೃತ್ತದಿಂದ ಜಿಲ್ಲಾಧಿಕಾರಿಗಳ ಕಚೇರಿವರೆಗೆ ಮಂಗಳವಾರ ಮ್ಯಾರಾಥಾನ್ ನಡೆಯಿತು.

ಮ್ಯಾರಾಥಾನ್ ನಂತರ ಜಿಲ್ಲಾಡಳಿತ ಭವನದ ಮೆಟ್ಟಿಲುಗಳ ಮೇಲೆ ತಿರಂಗಾ ಗೀತ-ಗಾಯನದ ಅಂಗವಾಗಿ ವಿವಿಧ ದೇಶಭಕ್ತಿ ಗೀತೆಗಳನ್ನು ಹಾಡಲಾಯಿತು.ವಿದ್ಯಾರ್ಥಿಗಳು ತಿರಂಗಾ ಯಾತ್ರೆಯಲ್ಲಿ ಭಾಗವಹಿಸಿದ್ದರು. ಈ ವೇಳೆ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್, ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ್ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು, ಶಾಲಾ, ಕಾಲೇಜಿನ ವಿದ್ಯಾರ್ಥಿಗಳು, ಸ್ವಸಹಾಯ ಸಂಘದ ಮಹಿಳಾ ಸದಸ್ಯರು ಭಾಗವಹಿಸಿದ್ದರು.



## ಫಾಸ್ಟ್ ನ್ಯೂಸ್

### ವಿದ್ಯುತ್ ವ್ಯತ್ಯಯ

» ದಾವಣಗೆರೆ

ಜಲಸಿರಿ ಯೋಜನೆ ಯಡಿಯಲ್ಲಿ ನಿರಂತರ ಶುದ್ದ ಕುಡಿಯುವ ನೀರಿನ ಸರಬರಾಜು ಯೋಜನೆ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ ಆಗಸ್ಟ್ 14 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ಶನೇಶ್ವರ ಫೀಡರ್ ವ್ಯಾಪ್ತಿಯ ಜಿ.ಎಂ.ಐ.ಟಿ. ಕಾಲೇಜು, ದೇವರಾಜ ಅರಸ್ ಬಡಾವಣೆ, ಪೂಜಾ ಹೋಟೆಲ್, ಸಾಯಿ ಹೋಟೆಲ್, ಕೋರ್ಟ್ ಸುತ್ತ ಮುತ್ತ, ಗಿರಿಯಪ್ಪ ಲೇಔಟ್, ಪಿ.ಬಿ. ರಸ್ತೆ, ಸಂಗೊಳ್ಳಿ ರಾಯಣ್ಣ ಸರ್ಕಲ್, ವಾಣಿಜ್ಯ ತೆರಿಗೆ ಕಚೇರಿ, ದೂಡಾ ಕಚೇರಿ, ಬಿ.ಎಸ್.ಎನ್.ಎಲ್ ಕಚೇರಿ, ವಿನಾಯಕ ನಗರ, ಶಂಕರ್ ವಿಹಾರ್ ಬಡಾವಣೆ, ಮೋತಿ ಬೇಕರಿ ಮತ್ತು ಸುತ್ತಮುತ್ತ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ.

### ವಿದ್ಯಾಸಿರಿ, ಶುಲ್ಕ ಮರುಪಾವತಿ, ವಿದ್ಯಾರ್ಥಿವೇತನ ಸೌಲಭ್ಯಕ್ಕಾಗಿ ಅರ್ಜಿ

» ದಾವಣಗೆರೆ

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಪ್ರಸಕ್ತ ಸಾಲಿನಲ್ಲಿ ಮೆಟ್ರಿಕ್ ನಂತರದ ಕೋರ್ಸುಗಳಾದ ಪಿ.ಯು.ಸಿ, ಪದವಿ ಮತ್ತು ಸಂಯೋಜಿತ ಪದವಿ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1ರ ಅಲೆಮಾರಿ, ಅರೆಅಲೆಮಾರಿ ವಿದ್ಯಾರ್ಥಿಗಳಿಂದ, ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ, ಶುಲ್ಕ ಮರುಪಾವತಿ, ಮತ್ತು ವಿದ್ಯಾಸಿರಿ ಸೌಲಭ್ಯಗಳನ್ನು ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಲು ಆಗಸ್ಟ್ 15 ಕೊನೆಯ ದಿನವಾಗಿರುತ್ತದೆ. ವಿದ್ಯಾರ್ಥಿಗಳು https://ssp.postmatric.karnataka.gov.in ಮೂಲಕ ಆನ್‌ಲೈನ್ ನಲ್ಲಿ ಅರ್ಜಿಯನ್ನು ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ https://bcwd.karnataka.gov.in ವೆಬ್‌ಸೈಟ್‌ನ್ನು ನೋಡಬಹುದು. ಹಾಗೂ 8050770005, ಇ-ಮೇಲ್ ವಿಳಾಸ ಥಛಿತಿಜ್ಞಜಟಠಿಟುಟಜ@ ರಟಚಿಟ.ಛಿಂಟ, 1902 ಸಂಖ್ಯೆಗೆ ಸಂಪರ್ಕಿಸಲು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಗಾಯತ್ರಿ ತಿಳಿಸಿದ್ದಾರೆ.

### ರಂಗೋಲಿ ಸ್ಪರ್ಧೆ

» ದಾವಣಗೆರೆ

ಹರ್‌ಘರ್ ತಿರಂಗಾ ಕಾರ್ಯಕ್ರಮದ ಅಂಗವಾಗಿ ನಗರದ ಗ್ಲಾಸ್ ಹೌಸ್ ಆವರಣದಲ್ಲಿ ಆ.14 ರಂದು ಮಧ್ಯಾಹ್ನ 3 ಗಂಟೆಗೆ ಹರ್ ಘರ್ ತಿರಂಗಾ ರಂಗೋಲಿ ಸ್ಪರ್ಧೆ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಅಭಿಕುಮಾರ್ ತಿಳಿಸಿದ್ದಾರೆ.

### ಲೋಕಾ ಅಧೀಕ್ಷಕರಿಂದ ಅಹವಾಲು ಸ್ವೀಕಾರ

» ದಾವಣಗೆರೆ

ದಾವಣಗೆರೆ ಲೋಕಾಯುಕ್ತ ವಿಭಾಗದ ಪೊಲೀಸ್ ಅಧೀಕ್ಷಕರಾದ ಎಂ.ಎಸ್ ಕೌಲಾಪೂರೆ ಅವರು ದಾವಣಗೆರೆ ನಗರದ ಪ್ರವಾಸಿ ಮಂದಿರದಲ್ಲಿ ಆ.14 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1.30 ವರೆಗೆ ಸಾರ್ವಜನಿಕರ ಅಹವಾಲು ಸ್ವೀಕರಿಸಿ ನಂತರ ಭ್ರಷ್ಟಾಚಾರ ನಿರೋಧಕ ಕಾಯ್ದೆ ಹಾಗೂ ಕರ್ನಾಟಕ ಲೋಕಯುಕ್ತ ಕಾಯ್ದೆ ಬಗ್ಗೆ ಸೂಕ್ತ ಅರಿವು ನೀಡಲಾಗುವುದು.

### ಇಂದು ಚಿಕ್ಕೋಬನಹಳ್ಳಿ ಗ್ರಾಮದಲ್ಲಿ ಅನುಭಾವ ಶ್ರಾವಣ

» ಮೊಳಕಾಲ್ಮೂರು/ಚಿತ್ರದುರ್ಗ

ಚಿತ್ರದುರ್ಗದ ಶ್ರೀಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದ ವತಿಯಿಂದ ಆಯೋಜಿಸಿರುವ ಅನುಭಾವ ಶ್ರಾವಣ ಕಾರ್ಯಕ್ರಮವು ತಾಲ್ಲೂಕಿನ ಚಿಕ್ಕೋಬನಹಳ್ಳಿ ಗ್ರಾಮದಲ್ಲಿಂದು (ಆಗಸ್ಟ್ 14) ಏರ್ಪಡಿಸಿಲಾಗಿದೆ. ಬೆಳಗ್ಗೆ 10-30 ಗಂಟೆಯಿಂದ ಚಿತ್ರದುರ್ಗದ ಬಸವೇಶ್ವರ ವೈದ್ಯಕೀಯ ಆಸ್ಪತ್ರೆಯ ವೈದ್ಯರುಗಳಿಂದ ಉಚಿತ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ.

ಇದೇ ಸಂದರ್ಭದಲ್ಲಿ ಗ್ರಾಮದಲ್ಲಿ ಸಸಿ ನೆಡುವ ಕಾರ್ಯಕ್ರಮವೂ ಇದೆ.ನಂತರ ಸಭಾ ಕಾರ್ಯಕ್ರಮವು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ರಂಗಮಂದಿರದಲ್ಲಿ ಚಿತ್ರದುರ್ಗದ ಶ್ರೀ ಜಗದ್ಗುರು ಮುರುಘರಾಜೇಂದ್ರಬೃಹನ್ಮಠದ ಆಡಳಿತ ಮಂಡಳಿಯ ಸದಸ್ಯರಾದ ಡಾ.ಬಸವಕುಮಾರ ಸ್ವಾಮಿಗಳವರು,ಮಡಿವಾಳ ಮಾಚಿದೇವ ಗುರುಪೀಠದ ಬಸವ ಮಾಚಿದೇವ ಸ್ವಾಮೀಜಿಯವರ ಹಾಗೂ ಇನ್ನುಳಿದ ಮಹಾಸ್ವಾಮಿಗಳವರ ಸಮ್ಮುಖದಲ್ಲಿ ನಡೆಯುವ ಶಿವಾನುಭವ ಗೋಷ್ಠಿಯಲ್ಲಿ ದೇವನೂರು ಗುರುಮಲ್ಲೇಶ್ವರರು ವಿಷಯ ಕುರಿತು ನಿವೃತ್ತ ಪ್ರಾಚಾರ್ಯರಾದ ಜಿ.ಎಸ್. ಕೆಂಚಪ್ಪ ಅವರು ಉಪನ್ಯಾಸ ನೀಡಲಿದ್ದಾರೆ.ಜಮುರಾ ಕಲಾವಿದರಿಂದ ವಚನ ಸಂಗೀತ ಕಾರ್ಯಕ್ರಮ ಇರುತ್ತದೆಂದು ಗ್ರಾಮದ ಪ್ರಕಟಣೆ ತಿಳಿಸಿದೆ.

## ಪ್ರಮುಖ ಸುದ್ದಿ

### ಲಸಿಕೆ ಹಾಕಿಸಿ ಮಾರಕ ರೋಗಗಳಿಂದ ಮಕ್ಕಳ ರಕ್ಷಿಸಿ: ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ

# 5 ವರ್ಷದಲ್ಲಿ 7 ಬಾರಿ ನಿಮ್ಮ ಮಕ್ಕಳನ್ನು ಲಸಿಕಾ ಕೇಂದ್ರಕ್ಕೆ ಕರೆ ತನ್ನಿ

» ಚಿತ್ರದುರ್ಗ



ಜೀವಕ್ಕೆ ಕಂಟಕವಾಗಿರುವ 12 ಮಾರಕ ರೋಗಳಿಂದ ಮಕ್ಕಳನ್ನು ರಕ್ಷಿಸಲು ಪೋಷಕರು ತಪ್ಪದೇ ಎಲ್ಲಾ ಲಸಿಕೆಗಳನ್ನು ಹಾಕಿಸಬೇಕು ಎಂದು ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ ಹೇಳಿದರು.

ನಗರದ ವಾರ್ಡ್ ಸಂಖ್ಯೆ 32ರ ಕೆ.ಹೆಚ್.ಬಿ ಕಾಲೋನಿ ಅಂಗನವಾಡಿ ಕೇಂದ್ರದಲ್ಲಿ ಪ್ರತಿ ತಿಂಗಳು 2ನೇ ಮಂಗಳಾರ ನಡೆಯುವ ನಿರ್ದಿಷ್ಟ ಲಸಿಕಾ ಕಾರ್ಯಕ್ರಮದ ತಾಯಂದಿರ ಸಭೆಯಲ್ಲಿ ಅವರು ಮಾತನಾಡಿದರು.

ಲಸಿಕೆಗಳು ಜೀವಗಳನ್ನು ಉಳಿಸುತ್ತವೆ. ಲಸಿಕೆ ಎಂದರೆ ರಕ್ಷಣೆ. ತಡೆಗಟ್ಟಬಹುದಾದ ಎಲ್ಲಾ ರೋಗಗಳ ವಿರುದ್ಧ ಮಕ್ಕಳಿಗೆ ರಕ್ಷಣೆ ಸಿಗಲಿದೆ. 5 ವರ್ಷದಲ್ಲಿ 7 ಬಾರಿ ನಿಮ್ಮ ಮಕ್ಕಳನ್ನು ಲಸಿಕಾ ಕೇಂದ್ರಕ್ಕೆ ಕರೆ ತನ್ನಿ 12 ಮಾರಕ ರೋಗಗಳನ್ನು ತಡೆಗಟ್ಟಿ ಎಂದು ಹೇಳಿದರು.

ಕ್ಷೇತ್ರ ಅರೋಗ್ಯ ಶಿಕ್ಷಣಾಧಿಕಾರಿ ಬಿ.ಜಾನಕಿ ಮಾತನಾಡಿ, ಬಿಸಿಜಿ ಲಸಿಕೆಯು ಮಕ್ಕಳಲ್ಲಿ ಮೆನಿಂಜೈಟಿಸ್ ಮತ್ತು ಹರಡುವ ಟಿಬಿ ವಿರುದ್ಧ ದಾಖಲಿತ ರಕ್ಷಣಾತ್ಮಕ ಪರಿಣಾಮ ಹೊಂದಿದೆ. ಎಲ್ಲಾ ಶಿಶುಗಳು ಜನನದ ನಂತರ ಸಾಧ್ಯವಾದಷ್ಟು ಬೇಗ ಹೆಪಟೈಟಿಸ್ ಬಿ ಲಸಿಕೆ ಪಡೆಯಬೇಕು ಎಂದು ಡಬ್ಲ್ಯೂಹೆಚ್‌ಒ ಶಿಫಾರಸ್ಸು ಮಾಡುತ್ತದೆ. ಮೇಲಾಗಿ 24 ಗಂಟೆಗಳ ಒಳಗೆ, ನಂತರ ಎರಡು ಅಥವಾ ಮೂರು ಡೋಸ್ ಹೆಪಟೈಟಿಸ್ ಬಿ ಲಸಿಕೆಯನ್ನು ಕನಿಷ್ಠ 4 ವಾರಗಳ ಅಂತರದಲ್ಲಿ ವ್ಯಾಕ್ಸಿನೇಷನ್ ಮಾಡಿಸಬೇಕು ಎಂದು ಹೇಳಿದರು.

ಪೋಲಿಯೊವನ್ನು ತಡೆಗಟ್ಟಲು ಬಾಯಿಯ ಪೋಲಿಯೊ ಲಸಿಕೆ ನೀಡಲಾಗುತ್ತದೆ. ಪೆಂಟಾವಲೆಂಟ್ ಲಸಿಕೆಯು ಮಗುವಿಗೆ ಐದು ಮಾರಣಾಂತಿಕ ಕಾಯಿಲೆಗಳಿಂದ ರಕ್ಷಣೆ ನೀಡುತ್ತದೆ. ಡಿಫ್ತಿರಿಯಾ, ಪೆರ್ಟುಸಿಸ್, ಟೆಟನಸ್, ಹೆಪಟೈಟಿಸ್ ಬಿ ಮತ್ತು ಹಿಬ್, ಪೆಂಟಾವಲೆಂಟ್ ಲಸಿಕೆ ನೀಡುವುದರಿಂದ ಮಗುವಿಗೆ ಮುಳ್ಳುಗಳ ಸಂಖ್ಯೆಯನ್ನು ಕಡಿಮೆ ಮಾಡುತ್ತದೆ ಮತ್ತು ಎಲ್ಲಾ ಐದು ರೋಗಗಳಿಂದ ರಕ್ಷಣೆ ನೀಡುತ್ತದೆ ಎಂದರು.

ಹಿರಿಯ ಆರೋಗ್ಯ ಸುರಕ್ಷತಾಧಿಕಾರಿ ಕಾತ್ಯಾನಮ್ಮ ಮಾತನಾಡಿ, ಲಸಿಕಾ ನಂತರ ಸಂಭವಿಸಬಹುದಾದ ಅಡ್ಡ ಪರಿಣಾಮಗಳ ನಿರ್ವಹಣೆ, ಲಸಿಕಾ ವೇಳಾಪಟ್ಟಿ ಮಕ್ಕಳಿಗೆ ನೀಡುವ ಪೌಷ್ಟಿಕ ಪೂರಕ ಆಹಾರದ ಬಗ್ಗೆ ದಾವಣಗೆರೆ ಮಿಕ್ಸ್ ತಯಾರಿಸುವ ಬಗ್ಗೆ ಪ್ರಾತ್ಯಕ್ಷಿಕೆ ನೀಡಿದರು. ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ಗೀತಾ ಅವರು 12 ಮಕ್ಕಳಿಗೆ 3 ಜನ ಗರ್ಭಿಣಿಯರಿಗೆ ವಿವಿಧ ಹಂತಗಳ ಲಸಿಕೆ ನೀಡಿದರು.

ಕಾರ್ಯಕ್ರಮದಲ್ಲಿ ಆಶಾ ಕಾರ್ಯಕರ್ತೆ ಅನುರಾಧ, ಅಂಗನವಾಡಿ ಕಾರ್ಯಕರ್ತೆ ಈರಮ್ಮ, ತಾಯಿ ಮಕ್ಕಳು, ಪೋಷಕರು ಗರ್ಭಿಣಿಯರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಧರ್ಮದ ನೆಲೆಗಟ್ಟಿನಲ್ಲಿ ಜನರನ್ನ ಸನ್ಮಾರ್ಗಕ್ಕೆ ಕೊಂಡೊಯ್ದ ಏಕೈಕ ಮಠ ಅದು ಮುರುಘಾಮಠ



» **ಹೊಸದುರ್ಗ**

ಕರ್ನಾಟಕ ರಾಜ್ಯ, ಮಾತ್ರವಲ್ಲದೆ ದಕ್ಷಿಣ ಭಾರತದ ಜನರ ಮನೆ ಮನಗಳಿಗೆ ಆಧ್ಯಾತ್ಮದ ಅರಿವು ನೀಡಿದ,ಅದರಂತೆ ಬಸವಾದಿ ಶರಣರ ಜೀವನ ಮೌಲ್ಯಗಳನ್ನ ಜನಮಾನಸಕ್ಕೆ ಆಧ್ಯಾತ್ಮದ ಮೂಲಕ ಧರ್ಮದ ನೆಲೆಗಟ್ಟಿನಲ್ಲಿ ಜನರನ್ನ ಸನ್ಮಾರ್ಗಕ್ಕೆ ಕೊಂಡೊಯ್ದ ಏಕೈಕ ಮಠ ಅದು ಚಿತ್ರದುರ್ಗದ ಮುರುಘಾಮಠ ಎಂದು ವಿಶ್ರಾಂತ ಪ್ರಾಚಾರ್ಯರು ಆರ್ಥಿಕ ವಿಶ್ಲೇಷಕರೂ ಆದ ಡಾ. ಜಿ.ಎನ್.ಮಲ್ಲಿಕಾರ್ಜುನಪ್ಪ ಅವರು ಅಭಿಪ್ರಾಯ ವ್ಯಕ್ತಪಡಿಸಿದರು.ತಾಲೂಕಿನ ಗುಡ್ಡದ ನೇರಲಕೆರೆ ಗ್ರಾಮದಲ್ಲಿನ ತಿಪ್ಪೇರುದ್ರಸ್ವಾಮಿ ಸಮುದಾಯ ಭವನದಲ್ಲಿ ಸೋಮವಾರ ಸಂಜೆ ಚಿತ್ರದುರ್ಗದ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದ ವತಿಯಿಂದ ಆಯೋಜಿಸಿದ್ದ ಅನುಭಾವ ಶ್ರಾವಣ ಸರಣಿ ವಿಶೇಷಕಾರ್ಯಕ್ರಮದಲ್ಲಿ ಭಾಗವಹಿಸಿ ಶ್ರೀ ಜಯದೇವ ಮಹಾಸ್ವಾಮಿಗಳವರ ವಿಷಯ ಕುರಿತು ಮಾತನಾಡಿದ ಅವರು ಮೈಸೂರಿನ ಮಹಾರಾಜರಿಂದ ಶ್ರೀಮನ್ಮಹಾರಾಜ ನಿರಂಜನ ಜಗದ್ಗುರು ಎಂದು ಕರೆಸಿಕೊಂಡ ಜಯದೇವ ಜಗದ್ಗುರುಗಳು ಮಹಿಳೆಯರಿಗೆ ಸಮಾನತೆ ತಂದದ್ದು ಅನ್ನದಾಸೋಹ ಯಶಸ್ವಿಯಾಗಿ ನಿಭಾಯಿಸಿದ್ದು ಜಯದೇವ ಜಗದ್ಗುರುಗಳು ಎಂದ ಅವರು ಒಬ್ಬ ಸಾಧಕರ ಜೀವನ ತಿಳಿಯುವುದು, ಮಕ್ಕಳನ್ನ ಸಾಧನೆಯ ಹಾದಿಯಲ್ಲಿ ನಡೆಯುವಂತೆ ಪ್ರೇರಣೆ ನೀಡುವುದು ಈಗ ಅಗತ್ಯವಿದೆ ಎಂದರು. ಸಾನಿಧ್ಯ ವಹಿಸಿದ್ದ ಮುರುಘೇಶ ಶ್ರೀಗಳು ಮಾತನಾಡಿ ಗುರುವಿನ ಕರುಣೆ ಗುರು ಮುಟ್ಟಿ ಗುರುವಾಗುವುದು. ಗುರುವಿನ ಆಶೀರ್ವಾದದಿಂದ ಮತ್ತೊಬ್ಬ ಗುರು ಸಮರ್ಥನಾಗುತ್ತಾನೆ ಎಂದರು. ದಾವಣಗೆರೆ ವಿರಕ್ತಮಠದ ಡಾ.ಬಸವ ಪ್ರಭು ಸ್ವಾಮೀಜಿ ಮಾತನಾಡಿ ಜಯದೇವ ಜಗದ್ಗುರುಗಳು. 1906ರಲ್ಲಿ ದಾವಣಗೆರೆಯಲ್ಲಿ ಮೊದಲ ಬಾರಿಗೆ ವಿದ್ಯಾರ್ಥಿ ನಿಲಯ ನಿರ್ಮಾಣ ಮಾಡಿದರು.ಆ ನಂತರದಲ್ಲಿ ತಿಪಟೂರು, ಅರಸೀಕೆರೆ, ಬೆಂಗಳೂರು ಕಡೆಗಳಲ್ಲಿ ಸ್ಥಾಪಿಸಿ ಶಿಕ್ಷಣ ಹಾಗೂ ಉಚಿತ ಪ್ರಸಾದ ನಿಲಯದ ಪಿತಾಮಹ ಎನಿಸಿಕೊಂಡರು ಎಂದು ಸ್ಮರಿಸಿದರು.ಮುಖ್ಯ ಅತಿಥಿಗಳಾಗಿ ಜಿಎನ್ ಕೆರೆ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶಾಂತಮ್ಮ, ಉಪಾಧ್ಯಕ್ಷ ದಾಸಪ್ಪ ಶಿವಕುಮಾರ್ ಮಾಜಿ ಅಧ್ಯಕ್ಷ, ಹಾಲಿ ಸದಸ್ಯರುಗಳಾದ ರಂಗಸ್ವಾಮಿ, ಎನ್ .ವಿ .ತಿಪ್ಪೇಸ್ವಾಮಿ, ಮುಂತಾದವರು ಉಪಸ್ಥಿತರಿದ್ದರು.. ಜಮುರಾ ಕಲಾವಿದರು ವಚನ ಗಾಯನ ನಡೆಸಿಕೊಟ್ಟರು. ಇದೇ ದಿನ ಬೆಳಗ್ಗೆ 10:30 ರಿಂದ ಶ್ರೀ ತಿಪ್ಪೇರುದ್ರಸ್ವಾಮಿ ಸಮುದಾಯವನದಲ್ಲಿ ಚಿತ್ರದುರ್ಗದ ಬಸವೇಶ್ವರ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ ವತಿಯಿಂದ ತಜ್ಞ ವೈದ್ಯರ ತಂಡದಿಂದ ಉಚಿತ ಆರೋಗ್ಯ ತಪಾಸಣೆ ಹಾಗೂ ಔಷಧಿ ವಿತರಣೆ ಸುಮಾರು ನೂರಾರು ಜನರಿಗೆ ನಡೆಯಿತು.

### ಜಿಟಿಟಿಸಿ ಪ್ರವೇಶಾತಿ: ಅವಧಿ ವಿಸ್ತರಣೆ

» **ಚಿತ್ರದುರ್ಗ**

ಚಿತ್ರದುರ್ಗ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ (ಜಿಟಿಟಿಸಿ) ಕೇಂದ್ರದಲ್ಲಿ 2024-25ನೇ ಶೈಕ್ಷಣಿಕ ಸಾಲಿನ ಡಿಪ್ಲೋಮಾ ಪ್ರವೇಶಾತಿ ಅವಧಿಯನ್ನು ಆಗಸ್ಟ್ 31 ರವರೆಗೆ ವಿಸ್ತರಿಸಲಾಗಿದೆ. ಡಿಪ್ಲೋಮಾ ಕೋರ್ಸ್‌ಗಳಾದ ಡಿಪ್ಲೋಮಾ ಇನ್ ಟೂಲ್ ಅಂಡ್ ಡೈ ಮೇಕಿಂಗ್, ಡಿಪ್ಲೊಮಾ ಇನ್ ಮೆಕಾಟ್ರಾನಿಕ್ಸ್, ಡಿಪ್ಲೊಮಾ ಇನ್ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ಇಂಜಿನಿಯರಿಂಗ್ ಕೋರ್ಸ್‌ಗಳಿಗೆ ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಮತ್ತು ಪಿಯುಸಿ ಪಾಸ್, ಫೇಲ್ ಆದ ವಿದ್ಯಾರ್ಥಿಗಳನ್ನು ನೇರ ಪ್ರವೇಶಾತಿಗೆ ಅವಕಾಶ ಕಲ್ಪಿಸಲಾಗಿದ್ದು, ಚಿತ್ರದುರ್ಗ ಜಿಟಿಟಿಸಿ ಕೇಂದ್ರದಲ್ಲಿ "ಮೊದಲು ಬಂದವರಿಗೆ ಮೊದಲ ಆದ್ಯತೆ' ಮೇರೆಗೆ ಪ್ರವೇಶ ಪ್ರಕ್ರಿಯೆ ಮಾಡಲಾಗುತ್ತದೆ.
ಈ ಕೋರ್ಸ್ ಅಧ್ಯಯನ ಮಾಡುವಾಗ ಮೂರು ವರ್ಷದ ಡಿಪ್ಲೋಮಾ ತರಬೇತಿ ಮುಗಿಸಿದ ನಂತರ ಪ್ರತಿಷ್ಠಿತ ಕಂಪನಿಗಳಾದ ಇನ್ಫೋಸಿಸ್, ವಿಪ್ರೋ, ಟಿವಿಎಸ್ ಟೋಯೊಟೋ ಮುಂತಾದ ಕಂಪನಿಗಳಲ್ಲಿ ಉದ್ಯೋಗ ಅವಕಾಶವಿದೆ. ಕಡ್ಡಾಯ ಒಂದು ವರ್ಷದ ಇಂಟರ್ನ್‌ಶಿಫ್ ತರಬೇತಿ ನೀಡಲಾಗುತ್ತದೆ. ಈ ಸಮಯದಲ್ಲಿ ವಿದ್ಯಾರ್ಥಿಗಳಿಗೆ ಪ್ರತಿ ತಿಂಗಳು ರೂ.15 ಸಾವಿರದಿಂದ ರೂ.25 ಸಾವಿರವರೆಗೂ ಶಿಷ್ಯವೇತನ ನೀಡಲಾಗುತ್ತದೆ. ಆಸಕ್ತ ಅಭ್ಯರ್ಥಿಗಳು ಚಿತ್ರದುರ್ಗ ಕುಂಚಿಗನಾಳ್ ಹಳೆಯ ಬೆಂಗಳೂರು ರಸ್ತೆಯ ಕಣಿವೆ ಮಾರಮ್ಮ ದೇವಸ್ಥಾನದ ಹಿಂಭಾಗದ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದ ದೂರವಾಣಿ ಸಂಖ್ಯೆ 9738465834, 9481866855, 9945616114 ಗೆ ಸಂಪರ್ಕಿಸಬಹುದು.

---

ಜಿಲ್ಲಾ ನೀರು ಮತ್ತು ನೈರ್ಮಲ್ಯ ಮಿಷನ್ ಸಮಿತಿ ಸಭೆ

# ತುರ್ತು ಕುಡಿಯುವ ನೀರಿನ ಕಾಮಗಾರಿಗಳಿಗೆ ಘಟನೋತ್ತರ ಅನುಮತಿ: ಜೆ.ಸೋಮಶೇಖರ್

» **ಚಿತ್ರದುರ್ಗ**

ಜಿಲ್ಲೆಯ ಬರಪೀಡಿತ ತಾಲ್ಲೂಕುಗಳಲ್ಲಿ 2023-24ನೇ ಸಾಲಿನಲ್ಲಿ ಕೈಗೊಂಡ ರೂ.3.3 ಕೋಟಿ ವೆಚ್ಚದ ತುರ್ತು ಕುಡಿಯುವ ನೀರಿನ ಕಾಮಗಾರಿಗಳ ಕ್ರಿಯಾ ಯೋಜನೆಗೆ ಘಟನೋತ್ತರ ಅನುಮತಿಯನ್ನು ನೀಡಲಾಯಿತು.

ಈ ಕುರಿತು ಮಂಗಳವಾರ ನಗರದ ಜಿ.ಪಂ.ಕಚೇರಿಯಲ್ಲಿ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಣಾಧಿಕಾರಿ ಎಸ್. ಜೆ.ಸೋಮಶೇಖರ್ ಅಧ್ಯಕ್ಷತೆಯಲ್ಲಿ ಜರುಗಿದ ಜಿಲ್ಲಾ ನೀರು ಮತ್ತು ನೈರ್ಮಲ್ಯ ಮಿಷನ್ ಸಮಿತಿ ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಯಿತು.

ಜಿಲ್ಲೆಯ ಬರ ಪೀಡಿತ ತಾಲ್ಲೂಕುಗಳಲ್ಲಿ ತುರ್ತು ಕುಡಿಯುವ ನೀರಿನ ಕಾಮಗಾರಿಗಳನ್ನು ಕೈಗೊಳ್ಳಲು ರಾಜ್ಯ ಸರ್ಕಾರ ಮೊದಲ ಹಂತದಲ್ಲಿ ಜಿಲ್ಲೆಗೆ ರೂ.1.5 ಕೋಟಿ ಹಾಗೂ ಎರಡನೇ ಹಂತದಲ್ಲಿ ರೂ.3.64 ಕೋಟಿ ಅನುದಾನ ಬಿಡುಗಡೆ ಮಾಡಿತ್ತು. ಸ್ಥಳೀಯ ಶಾಸಕರು ಹಾಗೂ ಜನಪ್ರತಿನಿಧಿಗಳ ಕೋರಿಕೆ ಮೇರೆಗೆ ಚಳ್ಳಕೆರೆ, ಚಿತ್ರದುರ್ಗ, ಹೊಳಲ್ಕೆರೆ, ಹಿರಿಯೂರು ಹಾಗೂ ಹೊಸದುರ್ಗ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ



ತಲಾ ರೂ.60.70 ಲಕ್ಷ ವೆಚ್ಚದ ತುರ್ತು ಕುಡಿಯುವ ನೀರಿನ ಕಾಮಗಾರಿಗಳನ್ನು ಕೈಗೊಳ್ಳಲಾಗಿತ್ತು. ಪೂರ್ಣಗೊಂಡ ಈ ಕಾಮಗಾರಿಗಳ ಕ್ರಿಯಾ ಯೋಜನೆಗೆ ಘಟನೋತ್ತರವಾಗಿ ಸಭೆಯಲ್ಲಿ ಅನುಮೋದನೆ ನೀಡಲಾಯಿತು. ಕಳೆದ ಮೇ.29 ರಂದು ಜರುಗಿದ ಸಭೆಯಲ್ಲಿ ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರದ ರಾಂಪುರ ಹಾಗೂ ಇತರೆ ಗ್ರಾಮಗಳಿಗೆ ನೀರು ಸರಬರಾಜು ಮಾಡುವ ರೂ.60.70 ಲಕ್ಷ ವೆಚ್ಚದ ಹೊಸ ಪೈಪ್ ಲೈನ್ ಅಳವಡಿಕೆಗೆ ಕಾಮಗಾರಿಗೆ ಅನುಮತಿ ನೀಡಲಾಗಿತ್ತು.

ಜಲ ಜೀವನ್ ಮಿಷನ್ ಅಡಿ ಜಿಲ್ಲೆಯ 6 ತಾಲ್ಲೂಕುಗಳಲ್ಲಿ ನಾಲ್ಕು ಬ್ಯಾಚುಗಳಲ್ಲಿ 1568 ಕಾರ್ಯತ್ಮಕ ನಳ ನೀರು ಸಂಪರ್ಕ ಕಲ್ಪಿಸುವ ಕಾಮಾಗಾರಿ ಕೈಗೊಳ್ಳಲಾಗಿದೆ. ಈ ಪೈಕಿ ಅನುಷ್ಠಾನಗೊಂಡ ಹಾಗೂ ಅನುಷ್ಠಾನಗೊಳ್ಳುತ್ತಿರುವ ಒಟ್ಟು 1189 ಕಾಮಗಾರಿಗಳಿಗೆನಾಮಫಲಕಅಳವಡಿಸಿಲು ರೂ.4.61 ಕೋಟಿ ವೆಚ್ಚದ ಕ್ರಿಯಾ ಯೋಜನೆ ತಯಾರಿಸಿ, ಅನುಮೋದನೆಗಾಗಿ ಇಲಾಖಾ ನಿರ್ದೇಶಕರಿಗೆ ಪತ್ರ ಬರೆಯಲಾಗಿದೆ ಎಂದು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಇಂಜಿನಿಯರ್ ಬಸವನ ಗೌಡ ಸಭೆಯಲ್ಲಿ ತಿಳಿಸಿದರು.

ಪ್ರಸ್ತುತ ಅನುಷ್ಠಾನಗೊಳ್ಳುತ್ತಿರುವ ಕಾಮಗಾರಿಗಳಲ್ಲಿ ನಾಮಫಲಕ ಅಳವಡಿಸುವ ವೆಚ್ಚವನ್ನು ಜೋಡಿಸಿ ಕಾಮಾಗಾರಿ ಪೂರ್ಣಗೊಳಿಸಿ, ಈಗಾಗಲೇ ಪೂರ್ಣಗೊಂಡ ಕಾಮಗಾರಿಗಳ ನಾಮಫಲಕ ಅಳವಡಿಸಲು ಮಾತ್ರ ಕ್ರಿಯಾ ಯೋಜನೆ ಸಿದ್ಧಪಡಿಸುವಂತೆ ಮುಖ್ಯ ಕಾರ್ಯನಿರ್ವಾಣಾಧಿಕಾರಿ ಎಸ್. ಜೆ.ಸೋಮಶೇಖರ್ ಸೂಚಿಸಿದರು.

ಸಭೆಯಲ್ಲಿ ಜಿ.ಪಂ. ಉಪಕಾರ್ಯದರ್ಶಿ ತಿಮ್ಮಪ್ಪ, ಮುಖ್ಯಲೆಕ್ಕಾಧಿಕಾರಿ ಡಿ.ಆರ್. ಮಧು, ಉಪ ಅರಣ್ಯ ಸಂರಕ್ಷಣಾಧಿಕಾರಿ ರಾಜಣ್ಣ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯಪಾಲಕ ಅಭಿಯಂತರ ಹನುಮಂತಪ್ಪ ಸೇರಿದಂತೆ ಮತ್ತಿತರರು ಇದ್ದರು.

---

ಜಾಥ ಕಾರ್ಯಕ್ರಮಕ್ಕೆ ತಿರುಪತಿ ಪಾಟೀಲ್, ತಹಶೀಲ್ದಾರ್ ಚಾಲನೆ

## ಮನೆ-ಮನೆ ಮೇಲೆ ರಾಷ್ಟ್ರ ಧ್ವಜವನ್ನು ಹಾರಿಸಿ ರಾಷ್ಟ್ರ ಪ್ರೇಮ ಮೆರೆಯಲು ಹರ್ ಘರ್ ತಿರಂಗ ಅಭಿಯಾನ

» **ಹೊಸದುರ್ಗ**

ಪಟ್ಟಣದ ಪುರಸಭಾ ವ್ಯಾಪ್ತಿಯಲ್ಲಿ 78 ನೇ ಭಾರತ ಸ್ವಾತಂತ್ರ್ಯೋತ್ಸವ ಅಂಗವಾಗಿ ಎಲ್ಲಾ ಮನೆಗಳ ಮೇಲೆ ರಾಷ್ಟ್ರ ಧ್ವಜ ಹಾರಿಸಿ ರಾಷ್ಟ್ರ ಪ್ರೇಮ ಮೆರೆಯಲು ಹರ್ ಘರ್ ತಿರಂಗ ಅಭಿಯಾನವನ್ನು ಪ್ರತಿಯೊಬ್ಬ ವ್ಯಕ್ತಿಗೂ ತಲುಪುವಂತೆ ಸಂದೇಶ ಸಾರಲು ಮಂಗಳವಾರ ತಾಲ್ಲೂಕು ಆಡಳಿತ ಪುರಸಭೆ, ತಾಲ್ಲೂಕು ಪಂಚಾಯಿತಿ, ಆರೋಗ್ಯ ಇಲಾಖೆ ಮತ್ತು ಶಾಲಾ ಶಿಕ್ಷಣ ಇಲಾಖೆ ಸಂಘ-ಸಂಸ್ಥೆಗಳ ಸಂಯುಕ್ತ ಆಶ್ರಯದಲ್ಲಿ ತ್ರಿವರ್ಣ ಧ್ವಜ ಹಿಡಿದು ಮುಖ್ಯ ರಸ್ತೆಗಳಲ್ಲಿ ತಿರಂಗ ಯಾತ್ರಾ ಮತ್ತು ಮ್ಯಾರಾಥಾನ್ ಜಾಥ ಕಾರ್ಯಕ್ರಮಕ್ಕೆ ಮಂಗಳವಾರ ಪಟ್ಟಣದ ಟಿ.ಬಿ.ವೃತ್ತದ ಬಳಿ ತಹಶೀಲ್ದಾರ್ ತಿರುಪತಿ ಪಾಟೀಲ್, ಚಾಲನೆ ನೀಡಿದರು. ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ. ಮಾತನಾಡಿ ಭಾರತ ದೇಶವನ್ನು ಸ್ವಾತಂತ್ರ್ಯಗೊಳಿಸಲು ಹುತಾತ್ಮರಾದ ಸೈನಿಕರಿಗೆ ಗೌರವ ಸಮರ್ಪಣೆ ಮಾಡುವ ಸಲುವಾಗಿ ಎಲ್ಲಾ ಮನೆಗಳ ಮೇಲೆ ಆಗಸ್ಟ್ 15 ರಂದು ತ್ರಿವರ್ಣ ಧ್ವಜವನ್ನು ಹಾರಿಸುವುದು ಹಾಗೂ ಸಂಭ್ರಮಾಚರಣೆಯನ್ನು ಮಾಡುವ ಸಲುವಾಗಿ ಪಟ್ಟಣದ ಎಲ್ಲಾ ಅಂಗಡಿಗಳಲ್ಲಿ




ತಳಿರು ತೋರಣಗಳಿಂದ ಸುಸಜ್ಜಿತಗೊಳಿಸುವುದು ಮತ್ತು ತಾಲ್ಲೂಕು ಮಟ್ಟದ ಜೂನಿಯರ್ ಕಾಲೇಜ್ ಆವರಣದಲ್ಲಿ ಶಾಸಕರಾದ ಬಿ.ಜಿ ಗೋವಿಂದಪ್ಪ ಅವರ ಅಧ್ಯಕ್ಷತೆಯಲ್ಲಿ ಧ್ವಜಾರೋಹಣಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಅವರು ಮನವಿ ಮಾಡಿದ ಅವರು ನಿಷೇಧಿತ ಪ್ಲಾಸ್ಟಿಕ್‌ನಿಂದ ತಯಾರಿಸಲಾದ ಧ್ವಜಗಳನ್ನು ಬಳಸದಂತೆ ಹಾಗೂ ಮಾರಾಟ ಮಾಡದಂತೆ ನಿಷೇಧ ಏರಲಾಗಿದ್ದು, ಬಟ್ಟೆಯಿಂದ ಅಥವಾ ಪರಿಸರ ಸ್ನೇಹಿ ವಸ್ತುಗಳಿಂದ ತಯಾರಿಸಲಾದ ಭಾವುಟಗಳನ್ನು ಹಾರಿಸಲು ತಿಳಿಸಿದರು. ಜೊತೆಗೆ ಮನೆಯ ಮೇಲೆ ಹಾರಿಸಿದ ಭಾವುಟಗಳನ್ನು ಸೆಲ್ಫಿ ಫೋಟೋ ತೆಗೆದು ಹರ್ ಘರ್ ತಿರಂಗ ವೆಬ್ ಸೈಟ್‌ನಲ್ಲಿ ಅಪ್‌ಲೋಡ್ ಮಾಡಿ ಸರ್ಟಿಫಿಕೇಟ್‌ಗಳನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದಾದ ಮಾಹಿತಿಯನ್ನು ತಿಳಿಸಿದರು.ತಾಲೂಕು ಪಂಚಾಯಿತಿ ಇ.ಓ ಸುನೀಲ್ ಮಾತನಾಡಿ ಸರ್ಕಾರದಿಂದ ಧರ ನಿಗಧಿ ಮಾಡಿರುವ ಅಂಚೆ ಕಛೇರಿಯಲ್ಲಿ ಭಾವುಟಗಳನ್ನು ಪಡೆಯಲು ಅವಕಾಶ ನೀಡಲಾಗಿದ್ದು, ಸಾರ್ವಜನಿಕರು ಸದುಪಯೋಗ ಪಡಿಸಿಕೊಳ್ಳಬೇಕು ಎಂದರು. ಈ ಸಂಧರ್ಭದಲ್ಲಿ ಬಿ.ಇ.ಓ ಸೈಯಾದ್‌ಮೋಸಿನ್, ಆರೋಗ್ಯ ನಿರೀಕ್ಷಕರಾದ ಕಲ್ಪನಾ, ಬಸವರಾಜ ಎಂ, ಮಲ್ಲಿಕಾರ್ಜುನ್ ಹಾಜರಿದ್ದರು

## ತಾಲೂಕಿನ ಹಲವೆಡೆ 160 ದೇವಸ್ಥಾನಗಳಲ್ಲಿ ಸ್ವಚ್ಛತಾ



» **ಹೊಸದುರ್ಗ**

ಹೊಸದುರ್ಗ ಪಟ್ಟಣದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನಾ ಕಛೇರಿ ವತಿಯಿಂದ ತಾಲ್ಲೂಕಿನ ಹಲವೆಡೆ ಶ್ರಾವಣದ ಎರಡನೇ ವಾರವಾದ ಮಂಗಳವಾರದಂದು 160 ದೇವಸ್ಥಾನಗಳ ಸ್ವಚ್ಛತಾ ಕಾರ್ಯಕ್ರಮ ಮಾಡಲಾಯಿತು. ಸ್ವಚ್ಚತಾ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದ ಕ್ಷೇತ್ರ ಯೋಜನಾಧಿಕಾರಿ ಶಿವಣ್ಣ. ಎಸ್ ದೇವಸ್ಥಾನಗಳು ಸ್ವಚ್ಛವಾಗಿದ್ದಾಗ ಭಕ್ತಾಧಿಗಳಿಗೆ ಹೆಚ್ಚಿನ ಮನಃ ಶಾಂತಿ,ನೆಮ್ಮದಿ, ನಾವು ನಂಬಿರುವ ಸಕಲ ಇಷ್ಟಾರ್ಥಿಗಳ ಪೂರೈಕೆ ಆಗುವ ನಂಬಿಕೆ ಇರುತ್ತದೆ. ದೇವಸ್ಥಾನಗಳ ಸುತ್ತ ಮುತ್ತ ಕಸ ಕಡ್ಡಿ, ಪ್ಲಾಸ್ಟಿಕ್, ಹಣ್ಣು ಕಾಯಿ ಇತರ ತ್ಯಾಜ್ಯಗಳನ್ನು ಎಲ್ಲೆಂದರಲ್ಲಿ ಬಿಸಾಡದೆ ಸ್ವಚ್ಛತೆಯಿಂದ ಇಟ್ಟುಕೊಳ್ಳುವುದು ಪ್ರತಿಯೊಬ್ಬರ ಆದ್ಯ ಕರ್ತವ್ಯವಾಗಿದೆ ಎಂದರು. ತಾಲ್ಲೂಕಿನಲ್ಲಿ ಧರ್ಮಸ್ಥಳದ ಧರ್ಮಧಿಕಾರಿಯಾದ ವಿರೇಂದ್ರ ಹೆಗ್ಗಡೆಯವರ ಮಾರ್ಗದರ್ಶನದಲ್ಲಿ 160 ಸ್ಥಳೀಯ ದೇವಸ್ಥಾನಗಳು ಅಭಿವೃದ್ಧಿಯ ಸಹಕಾರದಿಂದ ಸುಮಾರು 8000 ಸ್ವಸಹಾಯ ಸಂಘದ ಸದಸ್ಯರು ಶ್ರಮದಾನದ ಮೂಲಕ ಸ್ವಚ್ಛತೆಯನ್ನು ಮಾಡಿ ಶ್ರಾವಣ ಮಾಸವನ್ನು ವೈಭವ್ಯದಿಂದ ಆಚರಣೆ ಮಾಡುವ ಗುರಿಯನ್ನು ಹೊಂದಲಾಗಿದೆ ಎಂದರು.

---

**ಪ್ರಮುಖ ಸುದ್ದಿ**

78 ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ಹರ್ ಘರ್ ತಿರಂಗಾ ಅಭಿಯಾನ

# ವಿವಿಧ ಸ್ಪರ್ಧೆ, ಧ್ವಜಾರೋಹಣದಲ್ಲಿ ಭಾಗವಹಿಸಲು ಡಿಸಿ ಕರೆ

ದಾವಣಗೆರೆ: 78 ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ಜಿಲ್ಲೆಯಾದ್ಯಂತ 'ಹರ್ ಘರ್ ತಿರಂಗಾ' ಅಭಿಯಾನವನ್ನು ಅರ್ಥಪೂರ್ಣವಾಗಿ ಆಚರಿಸಲು ಆಗಸ್ಟ್ 14 ಹಾಗೂ 15ರಂದು ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು ಸಾರ್ವಜನಿಕರು ತಮ್ಮ ಮನೆಗಳಲ್ಲಿ ರಾಷ್ಟ್ರಧ್ವಜಾರೋಹಣ ಮಾಡುವ ಮೂಲಕ ತಾವು ಭಾಗಿಯಾಗಬೇಕೆಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದರು.

ಅವರು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಹರ್ ಘರ್ ತಿರಂಗಾ ಅಭಿಯಾನದ ಅಂಗವಾಗಿಆಯೋಜಿಸಲುಉದ್ದೇಶಿಸಿರುವ ಕಾರ್ಯಕ್ರಮಗಳ ಬಗ್ಗೆ ಏರ್ಪಡಿಸಲಾದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು. ಮಕ್ಕಳಲ್ಲಿ ದೇಶಾಭಿಮಾನ ಮೂಡಿಸಲು ಶಾಲಾ, ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಸ್ವಾತಂತ್ರ್ಯ ಹೋರಾಟಗಾರರ ಕುರಿತು ಪ್ರಬಂಧ ಸ್ಪರ್ಧೆ, ಆಶುಭಾಷಣ ಸ್ಪರ್ಧೆ, ಚಿತ್ರಕಲಾ ಸ್ಪರ್ಧೆ ಆಯೋಜಿಸಲಾಗಿದೆ. ಯಶಸ್ವಿಯಾಗಿ ಕಾರ್ಯಕ್ರಮಗಳನ್ನು ಆಯೋಜಿಸಲು ಶಿಕ್ಷಣ ಇಲಾಖೆ ಉಪನಿರ್ದೇಶಕರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದರು.

ಮತ್ತು ಎಲ್ಲ ತಾಲ್ಲೂಕುಗಳಲ್ಲಿ ತಿರಂಗಾ ಯಾತ್ರೆಹಮ್ಮಿಕೊಳ್ಳಲಾಗಿದೆ.ವಿದ್ಯಾರ್ಥಿಗಳು, ಸಾರ್ವಜನಿಕರು, ಸಂಘ ಸಂಸ್ಥೆಗಳ ಸದಸ್ಯರು ಭಾಗವಹಿಸಲಿದ್ದಾರೆ. ಜೊತೆಗೆ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿಯು



ತಿರಂಗಾ ಯಾತ್ರೆಯನ್ನುಹಮ್ಮಿಕೊಳ್ಳಲಾಗಿದೆ ಎಂದರು.

ಆಗಸ್ಟ್ 14 ರಂದು ಬೆಳಿಗ್ಗೆ 6.30 ಕ್ಕೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಜಿಲ್ಲಾಡಳಿತ ಭವನದಿಂದ ಪಿ.ಬಿ.ರಸ್ತೆ ಮಾರ್ಗವಾಗಿ ಜಿಲ್ಲಾ ಕ್ರೀಡಾಂಗಣದವರೆಗೆ ಸೈಕಲ್ ಜಾಥಾ ಹಮ್ಮಿಕೊಳ್ಳಲಾಗಿದೆ. ಸಂಜೆ 4.30 ಕ್ಕೆ ಹೈಸ್ಕೂಲ್ ಮೈದಾನದಿಂದ ಜಿಲ್ಲಾ ಕ್ರೀಡಾಂಗಣದವರೆಗೆ ತಿರಂಗಾ ಮ್ಯಾರಥಾನ್ ಆಯೋಜಿಸಲಾಗಿದೆ' ಎಂದು ತಿಳಿಸಿದರು.

ರಾಷ್ಟ್ರಧ್ವಜದೊಂದಿಗಿನ ಸೆಲ್ಫಿ ಚಿತ್ರವನ್ನು https://harghartiranga.com ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಬಹುದು. ಎಲ್ಲ ತಾಲ್ಲೂಕುಗಳಲ್ಲೂ ಸೆಲ್ಫಿ ಪಾಯಿಂಟ್‌ಗಳವ್ಯವಸ್ಥೆ ಮಾಡಲಾಗಿದೆ. ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ತಿರಂಗಾ ಮ್ಯಾರಾಥಾನ್, ಬೀದಿ ಬದಿ ವ್ಯಾಪಾರಸ್ಥರ ಸಂಘಟನೆ, ಸ್ವ-ಸಹಾಯ ಸಂಘಗಳ ಸದಸ್ಯರು ಭಾಗವಹಿಸುವರು ಮತ್ತು ಎಲ್ಲ ವಿದ್ಯಾರ್ಥಿ ನಿಲಯಗಳಲ್ಲಿ ಸಾಂಸ್ಕೃತಿಕ ಸ್ಪರ್ಧೆ ಏರ್ಪಡಿಸಲಾಗಿದೆ ಎಂದು ತಿಳಿಸಿದರು.

ತೋಟಗಾರಿಕೆ ಇಲಾಖೆಯಿಂದ ನಗರದ ಗ್ಲಾಸ್‌ಹೌಸ್‌ನಲ್ಲಿ ಆಗಸ್ಟ್ 15 ರ ವರೆಗೆ ಪ್ರತಿ ದಿನ ಸಂಜೆ 5 ಗಂಟೆಗೆ ಸಂಗೀತ ಕಾರಂಜಿ ಮತ್ತು ಸೆಲ್ಫಿ ತಿರಂಗಾ ಪಾಯಿಂಟ್ ಆಯೋಜಿಸಲಾಗಿದೆ. ಕೆಎಸ್‌ಆರ್‌ಟಿಸಿ ಯಿಂದ 400ಕ್ಕೂ ಅಧಿಕ ಬಸ್‌ಗಳ ಮೇಲೆ ಹರ್ ಘರ್ ತಿರಂಗಾ ಅಭಿಯಾನದ ಪೋಸ್ಟರ್ ಅಂಟಿಸಲಾಗುತ್ತದೆ ಎಂದರು.

ರಾಷ್ಟ್ರಧ್ವಜ ಸಂಹಿತೆ ಅನುಸರಿಸಲು ಮನವಿ; ಮನೆ, ಕಚೇರಿ ಹಾಗೂ ಇನ್ನಿತರ ಸ್ಥಳಗಳಲ್ಲಿ ರಾಷ್ಟ್ರಧ್ವಜಾರೋಹಣ ಮಾಡುವ ವೇಳೆ ಯಾವುದೇ ಅವಘಡ ಸಂಭವಿಸದಂತೆ ಸಾರ್ವಜನಿಕರು ಎಚ್ಚರ ವಹಿಸಬೇಕು' ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಮನವಿ ಮಾಡಿದರು.

ಧ್ವಜಾರೋಹಣ ಮಾಡುವಾಗ ಎತ್ತರದಲ್ಲಿನ ವಿದ್ಯುತ್ ಕಂಬ ಹಾಗೂ ತಂತಿಗಳ ಬಗ್ಗೆ ಎಚ್ಚರ ವಹಿಸಬೇಕು. ಮಳೆಯಲ್ಲಿ ಧ್ವಜ ನೆನೆಯದಂತೆ, ಹಾಳಾಗದಂತೆ ನೋಡಿಕೊಳ್ಳಬೇಕು. ರಾಷ್ಟ್ರಧ್ವಜವು ಸೊಂಟದ ಭಾಗಕ್ಕಿಂತ ಕೆಳಗೆ ಇರಬಾರದು, ಎದೆ ಭಾಗಕ್ಕಿಂತ ಮೇಲೆಯೇ ಇರುವಂತೆ ನೋಡಿಕೊಳ್ಳಬೇಕು. ಧ್ವಜದ ಗೌರವಕ್ಕೆ ಚ್ಯುತಿ ಬಾರದಂತೆ ನೋಡಿಕೊಳ್ಳಬೇಕು' ಎಂದು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್ ಮಾತನಾಡಿ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ತಿರಂಗಾ ಯಾತ್ರೆಯನ್ನು ಕೈಗೊಳ್ಳಲಾಗುತ್ತದೆ. ಪ್ರತಿ ಮನೆಗಳಲ್ಲಿಯು ರಾಷ್ಟ್ರಧ್ವಜಾರೋಹಣ ಮಾಡಲು ಮತ್ತು ಸೆಲ್ಫಿ ಪಾಯಿಂಟ್‌ಗಳನ್ನು ಅಳವಡಿಸಲಾಗುತ್ತದೆ. ಮತ್ತು ಗ್ರಂಥಾಲಯಗಳಲ್ಲಿ ಸಂವಿಧಾನದ ಪೀಠಿಕೆಯನ್ನು ಬೋಧಿಸಲಾಗುವುದು. ದೇಶಭಕ್ತಿ ಚಲನಚಿತ್ರಗಳ ಪ್ರದರ್ಶನ, ಸಂವಾದ ಕಾರ್ಯಕ್ರಮ,

150 ಅಮೃತ ಸರೋವರಗಳ ದಂಡೆಯಲ್ಲಿ ಸ್ವಾತಂತ್ರ್ಯೋತ್ಸವ ಅಂಗವಾಗಿ ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ಬೈಕ್ ರ್‍ಯಾಲಿ, ಚರ್ಚಾ ಸ್ಪರ್ಧೆಗಳನ್ನು ಆಯೋಜಿಸಲಾಗುತ್ತದೆ ಎಂದರು.

ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ್ ಮಾತನಾಡಿ ಜಿಲ್ಲೆಯ ಎಲ್ಲ 24 ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ರಾಷ್ಟ್ರ ಧ್ವಜಾರೋಹಣ ನಡೆಯಲಿದೆ. ಮತ್ತು ಸಾರ್ವಜನಿಕರು ಧ್ವಜಾರೋಹಣ ವೇಳೆ ಧ್ವಜಸಂಹಿತೆಯನ್ನು ಪಾಲಿಸಬೇಕೆಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್ ಹಾಗೂ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T